RNI: KNKAN/ 25/A5387 | ಸಂಪಾದಕರು: ರಾಜೇಶ್ವರಿ ಎನ್. ಓಲೇಕಾರ | ಸಿಇಒ: ಚಂದ್ರಶೇಖರ ಎನ್.ಕೆ. | ಸಹ ಸಂಪಾದಕರು: ಶಿವಕುಮಾರ

ಸಮಾಲೋಚನೆ ಸುದ್ದಿ

ಕನ್ನಡ ದಿನ ಪತ್ರಿಕೆ

ನೇರ ನಿಖರ ನಿರ್ದಿಷ್ಟ

ಮೊ.ನಂ: 8095203132 PMG/KA/NK/HVR-59/2026-28 SAMALOCHANE RANEBENNURSUDDI Kannada Daily Morning

ವಾಲ್ಮೀಕಿ ರಾಮಾಯಣ ಮಾನವಕುಲಕ್ಕೆ ಶ್ರೇಷ್ಠ ಜೀವನದರ್ಶನ >> 2

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ನ. 12ರ ಗಡುವು >> 3

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ನ. 12ರ ಗಡುವು >> 4

ಸಂಪುಟ (Volume): 1 ಸಂಚಿಕೆ (Issue): 218 ಪುಟ (Page): 4 ದರ Rs. 2 ಗುರುವಾರ 5 ನವೆಂಬರ್ 2026 ● 5 NOVEMBER 2026 ಹಾವೇರಿ ಧಾರವಾಡ ಗದಗ ಕೊಪ್ಪಳ ವಿಜಯನಗರ ಬೆಳಗಾವಿ ಉತ್ತರ ಕನ್ನಡ samalochanersuddi@gmail.com

ರಾಣೆಬೆನ್ನೂರಿನಲ್ಲಿ ಗರಿಗೆದರಿದ ಜಿಪಂ, ತಾಪಂ ಚುನಾವಣೆ ಕಾವು!

ಟಿಕೆಟ್‌ಗಾಗಿ ಆಕಾಂಕ್ಷಿಗಳ ಲಾಬಿ ಜೋರು; ಕಾಂಗ್ರೆಸ್– ಬಿಜೆಪಿ ಮುಖಂಡರ ಸರಣಿ ಸಭೆ

ಸಮಾಲೋಚನೆ ಸುದ್ದಿ ವಿಶೇಷ ರಾಣೆಬೆನ್ನೂರು

ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್ ಚುನಾವಣೆ ಘೋಷಣೆಗೆ ಹಾಗೂ ಅಂತಿಮ ಮೀಸಲಾತಿ ಪಟ್ಟಿ ಬಿಡುಗಡೆಯಾಗುವ ಮುನ್ನವೇ ರಾಣೆಬೆನ್ನೂರು ತಾಲೂಕಿನಲ್ಲಿ ರಾಜಕೀಯ ಚಟುವಟಿಕೆಗಳು ದಿನದಿಂದ ದಿನಕ್ಕೆ ಗರಿಗೆದರುತ್ತಿವೆ.

ಸರ್ಕಾರ ಅ.7 ರಂದು ರಾಜ್ಯದ ಎಲ್ಲಾ ಜಿಲ್ಲೆಗಳ ಜಿಪಂ, ತಾಪಂ ಮೀಸಲಾತಿ ಕರುಡ ಪಟ್ಟಿಯನ್ನು ಬಿಡುಗಡೆ ಮಾಡಲಾಗಿತ್ತು. ನಂತರ ಕರಡು ಮೀಸಲಾತಿ ಪಟ್ಟಿಯಲ್ಲಿ ಆಕ್ಷೇಪಣೆ ಸಲ್ಲಿಸಲು ಸಹ ಸರ್ಕಾರ ಅ.19 ರವರೆಗೆ ಕಾಲಾವಕಾಶ ನೀಡಿತ್ತು. ಅದರಂತೆ ರಾಜ್ಯದಲ್ಲಿ ಸುಮಾರು ಎರಡು ಸಾವಿರ ಆಕ್ಷೇಪಣೆ ಅರ್ಜಿ ಬಂದಿದ್ದು, ಇನ್ನೂ ಸರ್ಕಾರ ಅಧಿಕೃತವಾಗಿ ಅಂತಿಮ ಮೀಸಲಾತಿ ಪಟ್ಟಿ ಬಿಡುಗಡೆ ಮಾಡಿಲ್ಲ. ಆದರೂ

ಚುನಾವಣಾ ಸಿದ್ಧತೆಯ ಹಿನ್ನೆಲೆಯಲ್ಲಿ ತಾಲೂಕಿನಲ್ಲಿ ಪ್ರಬಲ ಪೈಪೋಟಿ ಹೊಂದಿರುವ ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳ ಮುಖಂಡರು ಸರಣಿ ಸಭೆಗಳನ್ನು ನಡೆಸುತ್ತಿದ್ದು, ಟಿಕೆಟ್ ಆಕಾಂಕ್ಷಿಗಳ ಪಟ್ಟಿ ಹನುಮಂತನ ಬಾಲದಂತೆ ಬೆಳೆಯುತ್ತಿದೆ.

ರಾಣೆಬೆನ್ನೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ನಾಲ್ಕು ಜಿಪಂ ಕ್ಷೇತ್ರಗಳು ಹಾಗೂ ಬ್ಯಾಡಗಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಎರಡು ಜಿಪಂ ಕ್ಷೇತ್ರ ಸೇರಿದಂತೆ ಒಟ್ಟು ಆರು ಜಿಲ್ಲಾ ಪಂಚಾಯಿತಿಗಳಿವೆ. ಈ ಕ್ಷೇತ್ರಗಳಲ್ಲಿ ಸ್ಪರ್ಧಿಸಲು ಆಕಾಂಕ್ಷಿಗಳ ಸಂಖ್ಯೆ ಹೆಚ್ಚಾಗಿರುವುದು ಕಂಡು ಬಂದಿದೆ.

ಚುರುಕುಗೊಂಡ ರಾಜಕೀಯ ಚಟುವಟಿಕೆ: ಕರೂರು, ಮೆಡ್ಲೇರಿ, ತುಮ್ಮಿನಕಟ್ಟಿ, ಹಲಗೇರಿ, ಕಾಕೋಳ ಹಾಗೂ ಜೋಯಿಸರಹರಳಹಳ್ಳಿ ಜಿಪಂ ಕ್ಷೇತ್ರಗಳಲ್ಲಿ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಆಯಾ ಕ್ಷೇತ್ರಗಳ ಮುಖಂಡರು, ಕಾರ್ಯಕರ್ತರು ಹಾಗೂ ಟಿಕೆಟ್ ಆಕಾಂಕ್ಷಿಗಳು ಪಕ್ಷದ ಪ್ರಮುಖ ನಾಯಕರನ್ನು ಭೇಟಿಯಾಗಿ ಈ ಬಾರಿ ತಮಗೆ ಅವಕಾಶ ಕಲ್ಪಿಸುವಂತೆ ಮನವಿ ಮಾಡುತ್ತಿದ್ದಾರೆ. ಇನ್ನು ಕೆಲವರು ತಮ್ಮ ಆಪ್ತ ನಾಯಕರ ಮೂಲಕ ಟಿಕೆಟ್ ಗಿಟ್ಟಿಸಿಕೊಳ್ಳಲು ತೆರೆಮರೆಯಲ್ಲಿ ಲಾಬಿ ನಡೆಸುತ್ತಿದ್ದಾರೆ.

ಬಿಜೆಪಿಯಲ್ಲಿ ಸಭೆಗಳ ಸರಣಿ; ಅಭ್ಯರ್ಥಿ ಆಯ್ಕೆ ಹೊಣೆ ಸ್ಥಳೀಯ ಮುಖಂಡರಿಗೆ?: ರಾಣೆಬೆನ್ನೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬಿಜೆಪಿ ಮುಖಂಡರು ಜಿಪಂ ಹಾಗೂ ತಾಪಂ ಚುನಾವಣೆ ಎದುರಿಸಲು ಸಜ್ಜಾಗುತ್ತಿದ್ದಾರೆ. ಅಂತಿಮ ಮೀಸಲಾತಿ ಪ್ರಕಟವಾಗುವ ಮುನ್ನವೇ ಬಿಜೆಪಿ ಜಿಲ್ಲಾಧ್ಯಕ್ಷ ವಿರೂಪಾಕ್ಷ ಬಳ್ಳಾರಿ ಮಾಜಿ ಶಾಸಕ ಅರುಣಕುಮಾರ ಪೂಜಾರ ನೇತೃತ್ವದಲ್ಲಿ ಕ್ಷೇತ್ರವಾರು ಮುಖಂಡರು ಹಾಗೂ ಕಾರ್ಯಕರ್ತರ ಸಭೆಗಳನ್ನು ನಡೆಸಲಾಗಿದೆ.



ತಾಪಂ ಆಕಾಂಕ್ಷಿಗಳಿಗೆ ಬರ..

ಸದ್ಯ ರಾಣೆಬೆನ್ನೂರ ತಾಲೂಕಿನಲ್ಲಿ ಒಟ್ಟು 23 ತಾಪಂ ಕ್ಷೇತ್ರಗಳಿದ್ದು ಅದರಲ್ಲಿ 12 ಮಹಿಳೆಯರಿಗೆ ಮೀಸಲಾತಿ ನೀಡಲಾಗಿದೆ. ಆದರೆ ಈ ವರೆಗೂ ಎಲ್ಲಿಯೂ ಸಹ ನಾನು ತಾಪಂ ಆಕಾಂಕ್ಷಿ ಎಂದು ಯಾರು ಹೇಳಿಕೊಂಡಿಲ್ಲ. ಅಲ್ಲದೆ ಸಾಮಾಜಿಕ ಜಾಲತಾಣದಲ್ಲಿ ಹಾಕಿಕೊಂಡಿಲ್ಲ. ಇದನ್ನು ಗಮನಿಸಿದರೆ ಜಿಪಂ ಕ್ಷೇತ್ರಕ್ಕೆ ಇರುವು ಸ್ಥಾನಮಾನ ತಾಪಂ ಇಲ್ಲ ಎಂಬಂತೆ ಕಾಣುತ್ತದೆ. ಅಲ್ಲದೆ ತಾಪಂ ಚುನಾವಣೆ ಸ್ಪರ್ಧೆ ಮಾಡಲು ಆಕಾಂಕ್ಷಿಗಳ ಬರ ಕಾಡಬಹುದು ಎಂದು ಎರಡು ಪಕ್ಷದ ಮುಖಂಡರ ಮಾತಾಗಿದೆ.

ಸಭೆಗಳಲ್ಲಿ ಕ್ಷೇತ್ರವಾರು ಪಕ್ಷ ಸಂಘಟನೆ, ಚುನಾವಣಾ ಸಿದ್ಧತೆ ಹಾಗೂ ಅಭ್ಯರ್ಥಿಗಳ ಆಯ್ಕೆ ಕುರಿತು ಚರ್ಚೆ ನಡೆಸಲಾಗಿದೆ ಎನ್ನಲಾಗಿದೆ. ಅಲ್ಲದೆ, ಅಭ್ಯರ್ಥಿಗಳ ಆಯ್ಕೆಯ ಜವಾಬ್ದಾರಿಯನ್ನು ಆಯಾ ಕ್ಷೇತ್ರಗಳ ಸ್ಥಳೀಯ ಮುಖಂಡರು ಹಾಗೂ ಕಾರ್ಯಕರ್ತರಿಗೆ ವಹಿಸಲಾಗಿದೆ ಎಂಬ ಮಾಹಿತಿಯೂ ಕೇಳಿಬಂದಿದೆ. ಚುನಾವಣಾ ಕಾರ್ಯತಂತ್ರ ರೂಪಿಸುವ ನಿಟ್ಟಿನಲ್ಲಿ ಪಕ್ಷದ ನಾಯಕರು ಚರ್ಚೆ ನಡೆಸಿದ್ದಾರೆ.

ಜಾತಿವಾರು ಪ್ರಾತಿನಿಧ್ಯ; ಟಿಕೆಟ್ ಹಂಚಿಕೆ ಸವಾಲು: ತಾಲೂಕಿನ ಆರು ಜಿಪಂ ಕ್ಷೇತ್ರಗಳ ಪೈಕಿ ಎರಡು ಕ್ಷೇತ್ರಗಳು ಪರಿಶಿಷ್ಟ ಜಾತಿಗೆ (ಎಸ್ಸಿ), ಒಂದು ಕ್ಷೇತ್ರ ಪರಿಶಿಷ್ಟ ಪಂಗಡಕ್ಕೆ (ಎಸ್ಟಿ), ಒಂದು ಕ್ಷೇತ್ರ ಹಿಂದುಳಿದ ವರ್ಗ 'ಎ' ಹಾಗೂ ಎರಡು ಕ್ಷೇತ್ರಗಳು ಸಾಮಾನ್ಯ ವರ್ಗಕ್ಕೆ ಮೀಸಲಾಗಿವೆ.

ಈ ಮೀಸಲಾತಿಯ ಹಿನ್ನೆಲೆಯಲ್ಲಿ ಸಾಮಾನ್ಯ ವರ್ಗದ ಕ್ಷೇತ್ರಗಳಲ್ಲಿ ಯಾವ ಸಮುದಾಯದ ಅಭ್ಯರ್ಥಿಗಳಿಗೆ ಆದ್ಯತೆ ನೀಡಬೇಕು? ಎಸ್ಸಿ ಮೀಸಲು ಕ್ಷೇತ್ರಗಳಲ್ಲಿ ಯಾರಿಗೆ ಅವಕಾಶ ಕಲ್ಪಿಸಬೇಕು? ಎಂಬ ಚರ್ಚೆಗಳು ಎರಡೂ ಪಕ್ಷಗಳಲ್ಲಿ ಆರಂಭವಾಗಿವೆ. ಜಾತಿವಾರು

ಅಂತಿಮ ಮೀಸಲಾತಿಯತ್ತ ಆಕಾಂಕ್ಷಿಗಳ ಚಿತ್ತ!

ಜಿಪಂ ಮತ್ತು ತಾಪಂ ಕ್ಷೇತ್ರಗಳ ಅಂತಿಮ ಮೀಸಲಾತಿ ಪ್ರಕಟಣೆಗಾಗಿ ಹಲವು ಟಿಕೆಟ್ ಆಕಾಂಕ್ಷಿಗಳು ಕಾತರದಿಂದ ಕಾಯುತ್ತಿದ್ದಾರೆ. ಮೀಸಲಾತಿ ಅಂತಿಮಗೊಂಡ ಬಳಿಕ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ಮತ್ತಷ್ಟು ವೇಗ ಪಡೆಯುವ ನಿರೀಕ್ಷೆಯಿದೆ. ಅಲ್ಲಿಯವರೆಗೆ ರಾಜಕೀಯ ನಾಯಕರ ಭೇಟಿಗಳು, ಆಂತರಿಕ ಸಭೆಗಳು ಹಾಗೂ ಟಿಕೆಟ್ ಗಿಟ್ಟಿಸಿಕೊಳ್ಳಲು ತೆರೆಮರೆಯ ಕಸರತ್ತು ಮುಂದುವರಿಯುವ ಸಾಧ್ಯತೆಯಿದೆ.

"ರಾಣೆಬೆನ್ನೂರು ತಾಲೂಕಿನಲ್ಲಿ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಆರು ಜಿಪಂ ಕ್ಷೇತ್ರಗಳಲ್ಲಿ ಯಾವ ಪಕ್ಷದಿಂದ ಯಾರಿಗೆ ಟಿಕೆಟ್ ಸಿಗಲಿದೆ ಎಂಬುದನ್ನು ಕಾದು ನೋಡಬೇಕು. ಅಂತಿಮವಾಗಿ ಜನರಿಗೆ ಉತ್ತಮ ಎನಿಸುವ ಅಭ್ಯರ್ಥಿಗೆ ನಾವು ಮತ ಚಲಾಯಿಸುತ್ತೇವೆ."

। ಮಾರುತಿ ಕೆ., ಮೆಡ್ಲೇರಿ ಗ್ರಾಮದ ಮತದಾರರು

ಮಲಗಿದ್ದ ವೇಳೆ ಇಬ್ಬರಿಗೆ ಹಾವು ಕಡಿತ: ಮಹಿಳೆ ಸಾವು ಮತ್ತೊಬ್ಬ ಪ್ರಾಣಾಪಾಯದಿಂದ ಪಾರು

ಸಮಾಲೋಚನೆ ಸುದ್ದಿ ಬ್ಯಾಡಗಿ

ಮಲಗಿದ್ದ ವೇಳೆ ಇಬ್ಬರಿಗೆ ಹಾವು ಕಚ್ಚಿದ ಪರಿಣಾಮ ಮಹಿಳೆಯೊಬ್ಬರು ಮೃತಪಟ್ಟಿದ್ದು, ಮತ್ತೊಬ್ಬರು ಪ್ರಾಣಾಪಾಯದಿಂದ ಪಾರಾ ಗಿರುವ ಘಟನೆ ಪಟ್ಟಣದ ಬೆಟ್ಟದ ಮಲ್ಲೇಶ್ವರ ನಗರದಲ್ಲಿ ಮಂಗಳವಾರ ರಾತ್ರಿ ನಡೆದಿದೆ.

ಬೆಟ್ಟದ ಮಲ್ಲೇಶ್ವರ ನಗರದ ನಿವಾಸಿ ಶಾಂತಮ್ಮ ಹರಿಯಪ್ಪ ಗೊತ್ತೂರ (55) ಮೃತಪಟ್ಟ ಮಹಿಳೆ. ಅವರ ಅಳಿಯ ಮಾಲತೇಶ ಹಳ್ಳಿ (35) ಹಾವು ಕಡಿತಕ್ಕೊಳಗಾಗಿದ್ದು, ಚಿಕಿತ್ಸೆ ಬಳಿಕ ಪ್ರಾಣಾಪಾಯದಿಂದ ಪಾರಾಗಿದ್ದಾ–ರೆ. ಮಂಗಳವಾರ ರಾತ್ರಿ ಎಂದಿನಂತೆ ಮಾಲತೇಶ ಹಳ್ಳಿ ಹಾಗೂ ಅವರ ಅತ್ತೆ ಶಾಂತಮ್ಮ ಮನೆಯಲ್ಲಿ ಮಲಗಿದ್ದರು. ರಾತ್ರಿ ಸುಮಾರು 12.30ರ ವೇಳೆಗೆ ಮನೆಯೊಳಗೆ ನುಗ್ಗಿದ ಹಾವು ಮಲಗಿದ್ದ ಮಾಲತೇಶ ಅವರ ಕೈಗೆ ಹಾಗೂ ಶಾಂತಮ್ಮ ಅವರ ಕಾಲಿಗೆ ಕಚ್ಚಿದೆ. ಹಾವು ಕಚ್ಚಿದ ತಕ್ಷಣ ಕುಟುಂಬಸ್ಥರು ಇಬ್ಬರನ್ನೂ ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿದ್ದಾರೆ. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಹಾವೇರಿ ಜಿಲ್ಲಾಸ್ಪತ್ರೆಗೆ ಕರೆದೊಯ್ದು, ಅಲ್ಲಿಂದ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಆದರೆ, ಚಿಕಿತ್ಸೆ ಫಲಕಾ ರಿಯಾಗದೆ ಶಾಂತಮ್ಮ ಮೃತಪಟ್ಟಿದ್ದು, ಮಾಲತೇಶ ಚಿಕಿತ್ಸೆ ಬಳಿಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಬಡವರ ವಸತಿ ಪ್ರದೇಶದಲ್ಲಿ ಆತಂಕ:ಕೂಲಿ ಕಾರ್ಮಿಕರು ಹಾಗೂ ಬಡ ಕುಟುಂಬಗಳು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ಬೆಟ್ಟದ ಮಲ್ಲೇಶ್ವರ ನಗರದಲ್ಲಿ ಮನೆಯೊಳಗೆ ಹಾವು ನುಗ್ಗಿ ಮಹಿಳೆಯೊಬ್ಬರ ಜೀವ ಬಲಿಪಡೆದಿರುವುದು ಸ್ಥಳೀಯರಲ್ಲಿ ಆತಂಕ ಮೂ ಡಿಸಿದೆ. ಮಳೆಗಾಲದ ನಂತರ ಹಾಗೂ ಮನೆಗಳ ಸುತ್ತಮುತ್ತ ಪೊದೆಗಳು ಬೆಳೆದಿರುವ ಪ್ರದೇಶಗಳಲ್ಲಿ ಹಾವುಗಳ ಓಡಾಟದ ಬಗ್ಗೆ ಸಾರ್ವಜನಿಕರು ಎಚ್ಚರಿಕೆ ವಹಿಸಬೇಕಿದೆ. ಘಟನೆಗೆ ಸಂಬಂಧಿಸಿದಂತೆ ಬ್ಯಾಡಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖ ಲಾಗಿದ್ದು, ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಉಸಿರುಗಟ್ಟಿಸಿ ಯುವತಿ ಕೊಂದ ಪೇದೆ

ಬೆಳಗಾವಿ: ಪೇದೆಯೊಬ್ಬರು ತಾನು ಪ್ರೀತಿಸುತ್ತಿದ್ದ ಯುವತಿಯನ್ನು ನಿರ್ಜನ ಪ್ರದೇಶಕ್ಕೆ ಕರೆದೊಯ್ದು ಉಸಿರುಗಟ್ಟಿಸಿ ಕೊಲೆ ಮಾಡಿರುವ ಆಘಾತಕಾರಿ ಘಟನೆ ಬೆಳಗಾವಿಯಲ್ಲಿ ನಡೆದಿದೆ.

ಕೊಲೆಯಾದ ಯುವತಿಯನ್ನು ಹಾರೋಗೇರಿ ಗ್ರಾಮದ ರಕ್ಷಿತಾ ಸರಿಕರ್(23) ಎಂದು ಗುರುತಿಸಲಾಗಿದ್ದು, ಪ್ರಿಯಕರ, ಕೇಂದ್ರ ಸಶಸ್ತ್ರ ಸೀಮಾ ಬಲದ ಪೇದೆ ಬಸಪ್ಪ ಸಾತನ್ನವರ್ ಅವರನ್ನು ಕೊಲೆ ಮಾಡಿದ ಆರೋಪದ ಮೇಲೆ ಬಂಧಿಸಲಾಗಿದೆ.

ರಕ್ಷಿತಾ ಮತ್ತು ಬಸಪ್ಪ ಕಳೆದ ನಾಲ್ಕು ವರ್ಷಗಳಿಂದ ಪರಸ್ಪರ ಪ್ರೀತಿಸುತ್ತಿದ್ದರು. ಅಕ್ಟೋಬರ್ 28ರಂದು ರಕ್ಷಿತಾಳನ್ನು ಸುತ್ತಾಡಲು ಅಂತ ಕರೆದು ನಿರ್ಜನ ಪ್ರದೇಶಕ್ಕೆ ಕರೆದೊಯ್ದು ಉಸಿರುಗಟ್ಟಿಸಿ, ಹೊಡೆದು ಭೀಕರವಾಗಿ ಕೊಲೆ ಮಾಡಿದ್ದಾನೆ.

ಕೊಲೆ ಬಳಿಕ ಪೇದೆ ಬಸಪ್ಪ ವಾಪಸ್ ಊರಿಗೆ ಬಂದಿದ್ದಾನೆ. ರಕ್ಷಿತಾ ಸಹೋದರನ ಜೊತೆ ಸೇರಿ ಹುಡುಕಾಟಕ್ಕೂ ಯತ್ನಿಸಿದ್ದಾನೆ. ಬಳಿಕ ರಕ್ಷಿತಾ ಸಹೋದರ ಪೊಲೀಸ್ ಠಾಣೆಗೆ ನಾಪತ್ತೆ ದೂರು ನೀಡಿದ್ದಾನೆ. ಪ್ರಕರಣ ಸಂಬಂಧ ಹಾರೋಗೇರಿ ಪೊಲೀಸರು ಬಸಪ್ಪನ್ನು ಕರೆದು ವಿಚಾರಣೆ ನಡೆಸಿದ್ದು, ಈ ವೇಳೆ ಕೊಲೆ ಮಾಡಿರೋದಾಗಿ ಬಸಪ್ಪ ಒಪ್ಪಿಕೊಂಡಿದ್ದಾನೆ. ಘಟನೆ ಸಂಬಂಧ ಗೋಕಾಕ್ ಶಹರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದು, ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ಕಾಂಗ್ರೆಸ್ ರಾಷ್ಟ್ರೀಯ ಪಕ್ಷವಾಗಿ ಉಳಿದಿಲ್ಲ; ಬೊಮ್ಮಾಯಿ

ಸತತ ಸೋಲಿನಿಂದ ಹತಾಶೆ, ಅರಾಜಕತೆ ಸೃಷ್ಟಿಸಲು ಯತ್ನ ಆರೋಪ । ಪ್ರಜಾಪ್ರಭುತ್ವ ಉಳಿಸಲು ಎಲ್ಲರೂ ಒಗ್ಗೂಡಲು ಕರೆ

ಸಮಾಲೋಚನೆ ಸುದ್ದಿ ಹಾವೇರಿ

ಚುನಾವಣೆಗಳಲ್ಲಿ ಸತತ ಸೋಲು ಅನುಭವಿಸುತ್ತಿರುವ ಕಾಂಗ್ರೆಸ್ ನಾಯಕರು ಹತಾಶರಾಗಿದ್ದಾರೆ. ಕಾಂಗ್ರೆಸ್ ಇಂದು ರಾಷ್ಟ್ರೀಯ ಪಕ್ಷವಾಗಿ ಉಳಿದಿಲ್ಲ. ಅನೈತಿಕ ಹಾಗೂ ದುಷ್ಟಕೂಟವಾಗಿ ಮಾರ್ಪಟ್ಟಿದೆ ಎಂದು ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಾಗ್ದಾಳಿ ನಡೆಸಿದರು. ನಗರದಲ್ಲಿ ಬಿಜೆಪಿ ಹಾವೇರಿ–ಧಾರವಾಡ ಜಿಲ್ಲಾ ಘಟಕದ ವತಿಯಿಂದ ಬುಧವಾರ ಆಯೋಜಿಸಿದ್ದ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಪಾದಯಾತ್ರೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಕಾಂಗ್ರೆಸ್ ಹಾಗೂ ರಾಹುಲ್ ಗಾಂಧಿ ನಿರಂತರ ಪ್ರಯತ್ನ ನಡೆಸುತ್ತಿದ್ದಾರೆ. ಬಾಂಗ್ಲಾದೇಶ ಮತ್ತು ನೇಪಾಳದಲ್ಲಿ ನಡೆದ ದಂಗೆಗಳು ಭಾರತದಲ್ಲಿಯೂ ನಡೆಯುತ್ತಿಲ್ಲ ಎಂಬ ಹತಾಶೆ ಕಾಂಗ್ರೆಸ್ ನಾಯಕರನ್ನು ಕಾಡುತ್ತಿದೆ. ಸಂಸತ್ತಿನಲ್ಲಿ ಚರ್ಚೆ ನಡೆಸುವ ಬದಲು 15 ದಿನಗಳ ಕಾಲ ಕಲಾಪಕ್ಕೆ ಅಡ್ಡಿಪಡಿಸಿದ್ದಾರೆ. ಎಸ್ಐಆರ್ ಪ್ರಕ್ರಿಯೆಯಲ್ಲಿ ಮತದಾರರ ಹೆಸರುಗಳನ್ನು ಕೈಬಿಟ್ಟಿರುವುದಾಗಿ ಕಾಂಗ್ರೆಸ್ ಆರೋಪಿಸುತ್ತಿದೆ. ಆದರೆ, ಪರಿಶೀಲನೆಯಲ್ಲಿ ಮೃತಪಟ್ಟವರು, ನಕಲಿ ಹಾಗೂ ವಿಳಾಸದಲ್ಲಿ ಲಭ್ಯವಿಲ್ಲದವರ ಹೆಸರುಗಳನ್ನು ಗುರುತಿಸಲಾಗಿದೆ. ಅರ್ಹ ಮತದಾರರಿಗೆ ಹೆಸರು ಸೇರ್ಪಡೆಗೆ ಅವಕಾಶವೂ ಇದೆ. ಆದರೂ ಕಾಂಗ್ರೆಸ್ ನಾಯಕರು 'ವೋಟ್ ಚೋರಿ' ಎಂದು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಟೀಕಿಸುವುದೇ ಕಾಂಗ್ರೆಸ್ ನಾಯಕರ ನಿತ್ಯದ ಕಾಯಕವಾಗಿದೆ. ಮೋದಿಯವರ ವಿರುದ್ಧ ಎಷ್ಟೇ ಅವಹೇಳನಕಾರಿ ಹೇಳಿಕೆ ನೀಡಿದರೂ ಅವರು ಸಹನೆಯಿಂದ ವರ್ತಿಸುತ್ತಿದ್ದಾರೆ. 2012ರ ಗುಜರಾತ್ ಚುನಾವಣೆಯಲ್ಲಿ ಸೋನಿಯಾ ಗಾಂಧಿ ಅವರು ಮೋದಿಯವರನ್ನು 'ಮೌತ್ ಕಾ ಸೌದಾಗರ್' ಎಂದು ಕರೆದಿದ್ದರು. ಬಳಿಕವೂ ಮೋದಿ ಚುನಾವಣೆಯಲ್ಲಿ ಗೆಲುವು ಸಾಧಿಸಿದರು. ಪ್ರಜಾಪ್ರಭುತ್ವದಲ್ಲಿ ಪ್ರಧಾನಿಯನ್ನು ಟೀಕಿಸುವ ಸ್ವಾತಂತ್ರ್ಯವಿದೆ ಎಂಬುದಕ್ಕೆ ಇದಕ್ಕಿಂತ ದೊಡ್ಡ ಉದಾಹರಣೆ ಬೇಕಿಲ್ಲ. ಆದರೆ, ಕರ್ನಾಟಕದಲ್ಲಿ ರಾಹುಲ್ ಗಾಂಧಿ ವಿರುದ್ಧ ಮಾತನಾಡಿದವರ ಮೇಲೆ ಪ್ರಕರಣ ದಾಖಲಿಸಿ ಕಿರುಕುಳ ನೀಡಲಾಗುತ್ತಿದೆ ಎಂದು ದೂರಿದರು.

2028ರಲ್ಲಿ ಬಿಜೆಪಿ ಅಧಿಕಾರಕ್ಕೆ ತನ್ನಿ: ಪ್ರಜಾಪ್ರಭುತ್ವ ಬಲಪಡಿಸಲು ಹಾಗೂ ದೇಶದಲ್ಲಿ ಅರಾಜಕತೆ ಸೃಷ್ಟಿಸುವ ಶಕ್ತಿಗಳ ವಿರುದ್ಧ ಎಲ್ಲರೂ ಒಗ್ಗಟ್ಟಾಗಬೇಕು. ಪಾದಯಾತ್ರೆಯಲ್ಲಿ ಇಡುವ ಪ್ರತಿಯೊಂದು ಹೆಜ್ಜೆಯೂ ಅರಾಜಕತೆಯ ವಿರುದ್ಧದ ಹೋರಾಟವಾಗಿದೆ. ವಿಕಸಿತ ಭಾರತ, ಆತ್ಮನಿರ್ಭರ ಭಾರತ ನಿರ್ಮಾಣದ ಸಂಕಲ್ಪದೊಂದಿಗೆ 2047ರ ವೇಳೆಗೆ ಭಾರತವನ್ನು ವಿಶ್ವದ ನಂಬರ್ ಒನ್ ಪ್ರಜಾಪ್ರಭುತ್ವ ರಾಷ್ಟ್ರವನ್ನಾಗಿಸಲು ಶ್ರಮಿಸಬೇಕು. 2028ರ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಅಧಿಕಾರಕ್ಕೆ ತಂದು, 2029ರಲ್ಲಿ ಮತ್ತೊಮ್ಮೆ ನರೇಂದ್ರ ಮೋದಿ ಅವರನ್ನು ಪ್ರಧಾನಿಯನ್ನಾಗಿಸಲು ಕಾರ್ಯಕರ್ತರು ಶ್ರಮಿಸಬೇಕು ಎಂದು ಕರೆ ನೀಡಿದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ರಾಜಕೀಯ ಲಾಭಕ್ಕಾಗಿ ಕಾಂಗ್ರೆಸ್ ಹಲವು ಆರೋಪಗಳನ್ನು ಮಾಡುತ್ತಿದೆ. ಕೇಂದ್ರ ಸರ್ಕಾರ ಎಸ್ಐಆರ್ ನಡೆಸುತ್ತಿರುವುದು ನುಸುಳುಕೋರರು ಹಾಗೂ ಮೃತಪಟ್ಟವರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು. ಅದನ್ನು ವಿರೋಧಿಸುವುದರಲ್ಲಿ ಅರ್ಥವಿಲ್ಲ. ಪಶ್ಚಿಮ ಪದವೀಧರರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಜನರು ತಕ್ಕ ಪಾಠ ಕಲಿಸಿದ್ದಾರೆ. ರಾಹುಲ್ ಗಾಂಧಿ ಪ್ರಬುದ್ಧತೆ ಇಲ್ಲದ ನಾಯಕ ಎಂದು ಟೀಕಿಸಿದರು. ಶಾಸಕ ಮಹೇಶ ಟೆಂಗಿನಕಾಯಿ ಮಾತನಾಡಿ, ಕಾಂಗ್ರೆಸ್ ಅಧಿಕಾರ ಕಳೆದುಕೊಂಡಾಗಿನಿಂದಲೂ ಒಂದಲ್ಲ ಒಂದು ನಾಟಕ ಮಾಡುತ್ತಿದೆ. ಚುನಾವಣೆ ಗೆದ್ದಾಗ ಇವಿಎಂ ಸರಿಯಾಗಿರುತ್ತದೆ. ಸೋತಾಗ ಮಾತ್ರ ಇವಿಎಂ ಬಗ್ಗೆ ಅನುಮಾನ ವ್ಯಕ್ತಪಡಿಸುತ್ತಾರೆ. ಬ

ಸಮಾಲೋಚನೆ ಸುದ್ದಿ
ಕನ್ನಡ ದಿನ ಪತ್ರಿಕೆ
SAMALOCHANE RANEBENNURSUDDI
Kannada Daily Morning

ರಕ್ತದಾನ ಮಾನವೀಯ ಸೇವೆಯ ಶ್ರೇಷ್ಠ ಕಾರ್ಯ

ಆರೋಗ್ಯವಂತರು ಸ್ವಯಂಪ್ರೇರಿತರಾಗಿ ರಕ್ತದಾನಕ್ಕೆ ಮುಂದಾಗಬೇಕು: ಹೋನ್ನೂರಪ್ಪ ಕಾಡಸಾಲಿ

ಸಮಾಲೋಚನೆ ಸುದ್ದಿ ರಾಣೇಬೆನ್ನೂರ

"ರಕ್ತದಾನವು ಸಮಾಜಮುಖಿ ಸೇವೆಯ ಪ್ರಮುಖ ಭಾಗವಾಗಿದ್ದು, ತುರ್ತು ಸಂದರ್ಭದಲ್ಲಿ ರಕ್ತದ ಅವಶ್ಯಕತೆ ಇರುವವರಿಗೆ ನೆರವಾ ಗಲು ಪ್ರತಿಯೊಬ್ಬರೂ ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು" ಎಂದು ವಾಲ್ಮೀಕಿ ಸಮಾಜದ ಅಧ್ಯಕ್ಷ ಹೋನ್ನೂರಪ್ಪ ಕಾಡಸಾಲಿ ಹೇಳಿದರು. ಪಟ್ಟಣದ ವಾಲ್ಮೀಕಿ ಭವನದಲ್ಲಿಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ವಾಲ್ಮೀಕಿ ಶಹರ ಮತ್ತು ತಾಲ್ಲೂಕು ಘಟಕ ಹಾಗೂ ವೈದ್ಯಕೀಯ ವಿಜ್ಞಾನ ಸಂಸ್ಥೆ ಹಾವೇರಿ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಸ್ವಯಂಪ್ರೇರಿತ ಬೃಹತ್ ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಆರೋಗ್ಯವಂತರು ವರ್ಷಕ್ಕೆರಡು ಬಾರಿ ರಕ್ತದಾನ ಮಾಡುವ ಮೂಲಕ ಮಾನವೀಯ ಸೇವೆಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.





ಮೋಹನಕುಮಾರ ಹುಲ್ಲತ್ತಿ ಮಾತನಾಡಿ, ರಕ್ತದಾನವು ಯಾವುದೇ ಪ್ರತಿಫಲದ ನಿರೀಕ್ಷೆಯಿಲ್ಲದೆ ಮತ್ತೊಬ್ಬರ ಜೀವ ಉಳಿಸುವ ಮಹತ್ವದ ಸೇವೆಯಾಗಿದೆ. ರಕ್ತದಾನ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಇಂತಹ ಶಿಬಿರಗಳನ್ನು ಆಯೋ ಜಿಸಲಾಗುತ್ತಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಸ್ವಯಂಪ್ರೇರಿತರಾಗಿ ರಕ್ತದಾನಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು. ಶಿಬಿರದಲ್ಲಿ ಸುಮಾರು 30 ಜನರು ರಕ್ತದಾನ ಮಾಡಿದರು,

ಈ ಸಂದರ್ಭದಲ್ಲಿ ಶಹರ ಘಟಕದ ಅಧ್ಯಕ್ಷ ಕುಮಾರ ಮ್ಯಾಗೇರಿ, ಪುರಸಭೆ ಮಾಜಿ ಸದಸ್ಯ ರಾಮಣ್ಣ ಕೋಡಿಹಳ್ಳಿ, ಶಿವಾನಂದ ಯಮನಕ್ಕನವರ, ಮಂಜುನಾಥ ಕಳಗೂಂಡ, ಪರಶುರಾಮ ಓಲೇಕಾರ, ಆನಂದ ಮುದುಕಮ್ಮನವರ, ಮಲ್ಲೇಶಪ್ಪ ಒಳಗೂಂದಿ, ನಾಗರಾಜ ರಾಮಣ್ಣನವರ, ನಿಂಗಪ್ಪ ಕೋಡಿಹಳ್ಳಿ, ನೀಲಕಂಠ ತರೇದಹಳ್ಳಿ, ಪ್ರಕಾಶ ಬಣಕಾರ, ಕಾಂತೇಶ, ವಿನಾಯಕ, ರಾಮಣ್ಣ ಬರದನಹಳ್ಳಿ, ಹುಲಗೆಪ್ಪ, ನಾಗರಾಜ ಕರ್ಚಡ, ಜಿಲ್ಲಾ ಆಸ್ಪತ್ರೆಯ ಡಾ.ರಶ್ಮಿ ಮಲ್ಲಾಡದ ಆಪ್ತ ಸಮಾಲೋಚಕ ರೇವಣ್ಣ ತೆಂಬದ ಹಾಗೂ ಆಸ್ಪತ್ರೆ ಸಿಬ್ಬಂದಿ ವರ್ಗ ಹಾಜರಿದ್ದರು.

ಮಹಾಲಿಂಗೇಶ್ವರ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಲಕ್ಷ ರೂ. ಅನುದಾನ ಮಂಜೂರು

ಸಮಾಲೋಚನೆ ಸುದ್ದಿ ರಾಣೇಬೆನ್ನೂರ

ಕುನಬೇವು ಪ್ಲಾಟ್ ಕಾರ್ಯಕ್ಷೇತ್ರದ ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ. ಟ್ರಸ್ಟ್ ವತಿಯಿಂದ ರು.1 ಲಕ್ಷ ಅನುದಾನ ಮಂಜೂರು ಮಾಡಿ, ಡಿ.ಡಿ. ವಿತರಿಸಲಾಯಿತು.

ಶ್ರೀ ಕ್ಷೇತ್ರ ಧರ್ಮಸ್ಥಳದ ಪೂಜ್ಯರ ಆಶೀರ್ವಾದದೊಂದಿಗೆ ಮಂಜೂರಾದ ಅನುದಾನದ ಡಿ.ಡಿ.ಯನ್ನು ದೇವಸ್ಥಾನದ ಕಮಿಟಿ ಅಧ್ಯಕ್ಷ ಈರಣ್ಣ ಹಾಗೂ ಸಮಿತಿಯ ಸದಸ್ಯರಿಗೆ ತಾಲೂಕು ಯೋಜನಾಧಿಕಾರಿ ಮಂಜುನಾಥ್ ಅವರು ವಿತರಿಸಿದರು.

ಈಸಂದರ್ಭದಲ್ಲಿಮಾತನಾಡಿದಯೋಜನಾಧಿಕಾರಿಮಂಜುನಾಥ್ ಅವರು, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಕೇವಲ ಆರ್ಥಿಕ ಚಟುವಟಿಕೆಗಳಿಗೆ ಸೀಮಿತವಾಗದೆ, ಗ್ರಾಮೀಣ ಪ್ರದೇಶಗಳ ಸಮಗ್ರ ಅಭಿವೃದ್ಧಿ ಹಾಗೂ ಸಾಮಾಜಿಕ, ಶೈಕ್ಷಣಿಕ ಮತ್ತು ಧಾರ್ಮಿಕ ಕ್ಷೇತ್ರಗಳ ಪ್ರಗತಿಗೂ ವಿಶೇಷ ಆದ್ಯತೆ ನೀಡುತ್ತಿದೆ ಎಂದರು.

ಗ್ರಾಮೀಣ ಭಾಗದ ದೇವಸ್ಥಾನಗಳು ನಮ್ಮ ಸಂಸ್ಕೃತಿ, ಸಂಪ್ರದಾಯ ಹಾಗೂ ಧಾರ್ಮಿಕ ನಂಬಿಕೆಗಳ ಪ್ರತೀಕವಾಗಿದ್ದು, ಇವುಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರ ಕಾರ್ಯಗಳಿಗೆ ಯೋಜನೆಯ ವತಿಯಿಂದ ಸಹಕಾರ ನೀಡಲಾಗುತ್ತಿದೆ ಎಂದರು. ಶ್ರೀ ಮಹಾಲಿಂಗೇಶ್ವರ ದೇವಸ್ಥಾನದ ಅಭಿವೃದ್ಧಿ ಕಾರ್ಯ–ಕ್ಕೆ ಮಂಜೂರಾಗಿರುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ದೇವಸ್ಥಾನದ ಜೀರ್ಣೋದ್ಧಾರ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

ಧಾರ್ಮಿಕ ಕೇಂದ್ರಗಳ ಅಭಿವೃದ್ಧಿಗೆ ಸಮಾಜದ ಎಲ್ಲ ವರ್ಗದ ಜನರು ಸಹಕಾರ ನೀಡುವ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸಬೇಕು ಎಂದರು. ಕಾರ್ಯಕ್ರಮದಲ್ಲಿ ವಲಯ ಮೇಲ್ವಿಚಾರಕಿ ಕವಿತಾ, ಸೇವಾಪ್ರತಿನಿಧಿ ಉಷಾ, ಒಕ್ಕೂಟದ ಅಧ್ಯಕ್ಷೆ ಭವಾನಿ ಹಾಗೂ ಸ್ವಸಹಾಯ ಸಂಘದ ಸದಸ್ಯರು ಮತ್ತಿತರರು ಉಪಸ್ಥಿತರಿದ್ದರು.



ಖೋ ಖೋ ಕ್ರೀಡಾಕೂಟದಲ್ಲಿ ರೇನ್‌ಬೋ ಶಾಲೆಗೆ ಚಾಂಪಿಯನ್ ಪಟ್ಟ!

ಸಮಾಲೋಚನೆ ಸುದ್ದಿ ರಾಣೇಬೆನ್ನೂರ

ಇಲ್ಲಿನಜೈನ್‌ಪಬ್ಲಿಕ್‌ಶಾಲೆಯಆವರಣದಲ್ಲಿನ.1ರಂದುಆಯೋಜಿಸಲಾಗಿದ್ದ ಹಾವೇರಿ ಜಿಲ್ಲಾ ಸಿಬಿಎಸ್‌ಇ ಹಬ್ ಮಟ್ಟದ ಖೋ ಖೋ ಕ್ರೀಡಾಕೂಟದಲ್ಲಿ ರೇನ್‌ಬೋ ರೆಸಿಡೆನ್ಶಿಯಲ್ ಪಬ್ಲಿಕ್ ಶಾಲೆಯ ತಂಡವು ಅತ್ಯುತ್ತಮ ಪ್ರದರ್ಶನ ನೀಡಿ ಚಾಂಪಿಯನ್‌ಶಿಪ್ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿದೆ. ಜಿಲ್ಲೆಯ ವಿವಿಧ ಸಿಬಿಎಸ್‌ಇ ಶಾಲೆಗಳ ತಂಡಗಳು ಭಾಗವಹಿಸಿದ್ದ ಈ ಕ್ರೀಡಾಕೂಟದಲ್ಲಿ ರೇನ್‌ಬೋ ಶಾಲೆಯ ಕ್ರೀಡಾಪಟುಗಳು ತಮ್ಮ ಅದ್ಭುತ ಚುರುಕುತನ, ಕ್ರೀಡಾ ಕೌಶಲ್ಯ, ಸಮಯಪ್ರಜ್ಞೆ ಹಾಗೂ ತಂಡದ ಸಮನ್ವಯತೆಯಿಂದ ಎದುರಾಳಿ ತಂಡಗಳನ್ನು ಮಣಿಸಿ ಪ್ರಶಸ್ತಿಗೆ ಭಾಜನರಾದರು. ವಿಜೇತ ತಂಡದ ಆಟಗಾರರಿಗೆ ಸಂಘಟಕರು ಪ್ರಮಾಣಪತ್ರ ನೀಡಿ ಗೌರವಿಸಿದರು.

ಈ ಸಾಧನೆಗೆ ಕಾರಣರಾದ ಖೋ ಖೋ ತಂಡದ ಆಟಗಾರರು ಹಾಗೂ ತರಬೇತಿ ನೀಡಿದ ದೈಹಿಕ ಶಿಕ್ಷಣ ಶಿಕ್ಷಕ ಕುಮಾರ್ ಎಸ್.ಜಿ. ಅವರನ್ನು ಶಾಲೆಯ ಆಡಳಿತ ಮಂಡಳಿಯ ಅಧ್ಯಕ್ಷರಾದ ಡಾ. ಸುರೇಶ ಸಿ.ಟಿ., ಉಪಾಧ್ಯಕ್ಷರಾದ ಲಲಿತಾ ಸುರೇಶ, ಪ್ರಾಂಶುಪಾಲರು, ಶಿಕ್ಷಕ ವೃಂದ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿ, ಮುಂದಿನ ಕ್ರೀಡಾ ಸಾಧನೆಗಳಿಗೆ ಶುಭ ಹಾರೈಸಿದ್ದಾರೆ.



ವಾಲ್ಮೀಕಿ ರಾಮಾಯಣ ಮಾನವಕುಲಕ್ಕೆ ಶ್ರೇಷ್ಠ ಜೀವನದರ್ಶನ: ಶಾಸಕ ಶಿವಣ್ಣನವರ

ಸಮಾಲೋಚನೆ ಸುದ್ದಿ ಬ್ಯಾಡಗಿ

ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ಕೇವಲ ಮಹಾಕಾವ್ಯವಲ್ಲ, ಅದು ಮಾನವೀಯ ಮೌಲ್ಯಗಳು, ಧರ್ಮ, ನ್ಯಾಯ, ಸತ್ಯ ಮತ್ತು ಆದರ್ಶ ಬದುಕಿನ ದಾರಿಯನ್ನು ತೋರಿಸುವ ಶ್ರೇಷ್ಠ ಗ್ರಂಥವಾಗಿದೆ ಎಂದು ಶಾಸಕ ಬಸವರಾಜ ಶಿವಣ್ಣನವರ ಹೇಳಿದರು.

ಪಟ್ಟಣದಲ್ಲಿ ಬುಧವಾರ ತಾಲೂಕಾಡಳಿತ, ತಾಪಂ ಬ್ಯಾಡಗಿ, ಪುರಸಭೆ ಸಮಾಜ ಕಲ್ಯಾಣ ಇಲಾಖೆ ಹಾಗೂ ವಾಲ್ಮೀಕಿ ಸಮಾಜ ವತಿಯಿಂದ ಆಯೋಜಿಸಲಾಗಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮಹರ್ಷಿ ವಾಲ್ಮೀಕಿ ಅವರು ತಮ್ಮ ಜ್ಞಾನ, ತಪಸ್ಸು ಹಾಗೂ ಸಾಹಿತ್ಯದ ಮೂಲಕ ಜಗತ್ತಿಗೆ ಅಮೂಲ್ಯ ಕೊಡುಗೆ ನೀಡಿದ್ದಾರೆ. ಅವರ ಜೀವನ ಮತ್ತು ಚಿಂತನೆಗಳು ಪ್ರತಿ ಯೊಬ್ಬರಿಗೂ ಸ್ಫೂರ್ತಿಯಾಗಿವೆ. ಸಮಾಜದಲ್ಲಿ ಸಮಾನತೆ, ಸಹೋದರತ್ವ ಹಾಗೂ ಮಾನವೀಯತೆಯ ಮೌಲ್ಯಗಳನ್ನು ಬೆಳೆಸುವ ಮೂಲಕ ಮಹನೀಯರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಮಹರ್ಷಿ ವಾಲ್ಮೀಕಿ ಅವರ ಸಂದೇಶಗಳು ಇಂದಿನ ಯುವಜನತೆಗೆ ಉತ್ತಮ ಮಾರ್ಗದರ್ಶನ ನೀಡುತ್ತವೆ ಎಂದು ಹೇಳಿದರು.

ವಾಲ್ಮೀಕಿ ಆದರ್ಶಗಳು ಎಲ್ಲರಿಗೂ ಪ್ರೇರಣೆ:ಮಾಜಿ ಶಾಸಕ ಸುರೇಶಗೌಡ ಪಾಟೀಲ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರ ಬದುಕು ಸಾಧನೆ, ಪರಿವರ್ತನೆ ಮತ್ತು ಜ್ಞಾನದ ಮಹತ್ವವನ್ನು ಸಾರುತ್ತದೆ. ವ್ಯಕ್ತಿಯ ಜೀವನದಲ್ಲಿ ಬದಲಾವಣೆ ಸಾಧ್ಯ ಎಂಬುದಕ್ಕೆ ವಾಲ್ಮೀಕಿ ಮಹರ್ಷಿಗಳ ಜೀವನವೇ ಮಹತ್ವದ ಉದಾಹರಣೆಯಾಗಿದೆ. ಅವರ ರಾಮಾಯಣವು ತಲೆಮಾರುಗಳಿಂದ ಜನರಿಗೆ ಸಂಸ್ಕಾರ, ಕರ್ತವ್ಯಪ್ರಜ್ಞೆ ಮತ್ತು ನೈತಿಕ ಮೌಲ್ಯಗಳನ್ನು ಕಲಿಸುತ್ತಿದೆ ಎಂದರು.

ಶಿಕ್ಷಣಕ್ಕೆ ಆದ್ಯತೆ ನೀಡಿ: ಮಾಜಿ ಶಾಸಕ ವಿರುಪಾಕ್ಷಪ್ಪ ಬಳ್ಳಾರಿ ಮಾತನಾಡಿ, ಮಹನೀಯರ ಜಯಂತಿಗಳನ್ನು ಕೇವಲ ಆಚ ರಣೆಗೆ ಸೀಮಿತಗೊಳಿಸದೆ, ಅವರ ವಿಚಾರಧಾರೆಗಳನ್ನು ಯುವಪೀಳಿಗೆಗೆ ಪರಿಚಯಿಸುವ ಕೆಲಸವಾಗಬೇಕು. ಸಮಾಜದ ಅಭಿವೃದ್ಧಿಗೆ ಶಿಕ್ಷಣವೇ ಪ್ರಮುಖ ಅಸ್ತ್ರವಾಗಿದ್ದು, ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಪೋಷಕರು ಹಾಗೂ ಸಮಾಜದ ಮುಖಂಡರು ಹೆಚ್ಚಿನ ಆದ್ಯತೆ ನೀಡಬೇಕು. ಸಂಘಟಿತರಾಗಿ ಸಮಾಜದ ಪ್ರಗತಿಗೆ ಶ್ರಮಿಸುವ ಮೂಲಕ ಮಹರ್ಷಿ ವಾಲ್ಮೀಕಿ ಅವರ ಆಶಯಗಳನ್ನು ಸಾಕಾರಗೊಳಿಸಬೇಕು ಎಂದರು.

ಈ ವೇಳೆ ಗ್ರೇಡ್–2 ತಹಸೀಲ್ದಾರ ಸಾರಿಕಾ ಸಿಂಗನಮಕ್ಕಿ, ಪಿಎಸ್‌ಐ ಭಾರತಿ ಕುರಿ. ಮುಖ್ಯಾಧಿಕಾರಿ ವಿನಯಕುಮಾರ ಹೊಳೆ ಪ್ಪಗೋಳ, ನೌಕರರಸಂಘದಅಧ್ಯಕ್ಷ ಎಂ.ಎನ್.ಕಂಬಳಿ, ಸಮಾಜಮುಖಂಡರಾದ ಪುರಸಭೆ ಮಾಜಿ ಸದಸ್ಯ ರಾಮಣ್ಣ ಕೋಡಿ ಹಳ್ಳಿ, ಶಿವಾನಂದ ಯಮನಕ್ಕನವರ, ಶಿವಪ್ಪ ಅಂಬಲಿ, ಕುಮಾರ ಮ್ಯಾಗೇರಿ, ಮಲ್ಲೇಶಪ್ಪ ಒಳಗುಂದಿ, ಮೋಹನಕುಮಾರ ಹುಲ್ಲತ್ತಿ, ನಿಂಗಪ್ಪ ಕೋಡಿಹಳ್ಳಿ, ಮಂಜುನಾಥ ಕೋಡಿಹಳ್ಳಿ,ಸೇರಿದಂತೆ ಸಮಾಜದ ಮುಖಂಡರು, ಜನಪ್ರತಿನಿಧಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.



ಭಾವಚಿತ್ರದ ಮೆರವಣಿಗೆ

ಪಟ್ಟಣದ ವಾಲ್ಮೀಕಿ ನಗರದಿಂದ ಆರಂಭವಾದ ಶ್ರೀ ಮಹರ್ಷಿ ವಾಲ್ಮೀಕಿ ಅವರ ಬೃಹತ್ ಭಾವಚಿತ್ರದ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚಾರ ಮಾಡಿತು.ಡಿಜೆ ಸದ್ದಿಗೆ ಯುವಕರು ಹೆಜ್ಜೆ ಹಾಕಿದ್ದು ಹಬ್ಬದ ವಾತಾವರಣ ಸೃಷ್ಟಿ ಮಾಡಿತ್ತು.

ಸುಂದರ ಪರಿಸರ ಉಳಿಸಲು ಪರಿಸರ ಸ್ನೇಹಿ ದೀಪಾವಳಿ ಹಬ್ಬ ಆಚರಿಸೋಣ

ಹಾವೇರಿ ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ

ಹಾವೇರಿ: ಜಿಲ್ಲಾದ್ಯಾದಂತ ನವೆಂಬರ್ 8 ರಿಂದ ಆಚರಿಸಲಿರುವ ದೀಪಾವಳಿ ಹಬ್ಬವನ್ನು ಆರೋಗ್ಯಯುತ ಮತ್ತು ಸುಂದರ ಪರಿಸರವನ್ನು ಉಳಿಸಲು ಪರಿಸರ ಸ್ನೇಹಿ ದೀಪಾವಳಿ ಹಬ್ಬ ಆಚರಿಸೋಣ ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ತಿಳಿಸಿದ್ದಾರೆ.

ಹಬ್ಬದ ಸಂದರ್ಭದಲ್ಲಿ ಸಿಡಿಸುವ ಪಟಾಕಿಗಳು ಶಬ್ದ ಮಾಲಿನ್ಯ ಮತ್ತು ವಾಯು ಮಾಲಿನ್ಯವನ್ನು ಉಂಟು ಮಾಡಿ ಪರಿಸರಕ್ಕೆ ಹಾನಿ ಮಾಡುತ್ತಿದೆ ಹಾಗೂ ಜನರ ಆರೋಗ್ಯವನ್ನು ಹದಗೆಡಿಸುತ್ತಿದೆ. ಪ್ರಾಣಿ–ಪಕ್ಷಿಗಳ ಕಲರವಕ್ಕೆ ಘಾಸಿ ಉಂಟುಮಾಡುತ್ತಿದೆ. ಆದ್ದರಿಂದ ದೀಪಾವಳಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಸರಳ ರೀತಿಯಲ್ಲಿ ಮಾಲಿನ್ಯ ರಹಿತವಾಗಿ ಮತ್ತು ಭಕ್ತಿ ಪೂರ್ವಕವಾಗಿ ಆಚರಿಸಬೇಕು ಎಂದು ಕೋರಿದ್ದಾರೆ.

ದೀಪಾವಳಿ ಬೆಳಕಿನ ಹಬ್ಬ, ಎಲ್ಲರೂ ಸಂಭ್ರಮ ಹಾಗೂ ಸಡಗರದಿಂದ ಆಚರಿಸುವ ಹಬ್ಬ, ಪಟಾಕಿಗಳನ್ನು ಬಳಸುವಾಗ ಎಚ್ಚರವಿರಲಿ, ಸ್ವಲ್ಪ ಮೈಮರೆತಲ್ಲಿ ಜೀವನದ ಬೆಳಕನ್ನೇ ಕಸಿದುಕೊಳ್ಳಬಹುದು. ಹಬ್ಬದ ಆಚರಣೆ ಜಾಗರೂಕತೆ ಹಾಗೂ ಸುರಕ್ಷತೆಯಿಂದ ಕೂಡಿರಲಿ ಎಂದು ತಿಳಿಸಿದ್ದಾರೆ.

ಹಸಿರು ಪಟಾಕಿ ಗುರುತಿಸುವಿಕೆ: ಪಟಾಕಿ ಬಾಕ್ಸ್‌ಗಳ ಮೇಲೆ ಕೌನ್ಸಿಲ್ ಆಫ್ ಸೈಂಟಿಫಿಕ್ ಅಂಡ್ ಇಂಡಸ್ಟ್ರಿಯಲ್ ರಿಸರ್ಚ್(ಅಖಸಖಐ) ಮತ್ತು ನ್ಯಾಷನಲ್ ಎನ್ವಿರಾಮೆಂಟಲ್ ಇಂಜಿನಿಯರಿಂಗ್ ರಿಸರ್ಚ್ ಇನ್ಸ್ಟಿಟ್ಯೂಟ್ (ಓಇಇಐಖಐ) ಇವರ ಲೋಗೋ ಹಾಗೂ ನೊಂದಿತ ಸಂಖ್ಯೆಯೊಂದಿಗೆ ಮುದ್ರಿತವಾಗಿರಬೇಕು. ಅಧೀಕೃತ ಮಾರಾಟಗಾರರು ಸಂಬಂಧಪಟ್ಟ ಇಲಾಖೆ/ಪ್ರಾಧಿಕಾರದಿಂದ ನೀಡುವ ಪರವಾನಗಿಯಲ್ಲಿ ನಿಗಧಿಪಡಿಸಿರುವ ದಿನಾಂಕ ಮತ್ತು ಸ್ಥಳಗಳಲ್ಲಿ ಮಾತ್ರ ತಾತ್ಕಾಲಿಕ ಪಟಾಕಿ ಅಂಗಡಿಗಳನ್ನು ಇಡಬೇಕು. ನಿಷೇಧಿತ ಪಟಾಕಿಗಳ ಮಾರಾಟ ಕಂಡುಬಂದಲ್ಲಿ ಅಂತಹ ಪಟಾಕಿಗಳನ್ನು ವಶಪಡಿಸಿಕೊಳ್ಳಲಾಗುವುದು ಮತ್ತು ನಿಯಮಗಳನ್ವಯ ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಬೆಳಕಿನ ಹಬ್ಬ: ಸಾಧ್ಯವಾದಷ್ಟು ಹಣತೆ ದೀಪ ಹಚ್ಚುವ ಮೂಲಕ ಬೆಳಕಿನ ಹಬ್ಬ ದೀಪಾವಳಿಯನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ. ಅಪಾರ್ಟ್‌ಮೆಂಟ್,ವಠಾರ,ನೆರೆಹೊರೆಯ ಮನೆಯವರು ಒಂದೆಡೆ ಕಲೆತು ಪರಿಸರ ಸ್ನೇಹಿ ದೀಪಾವಳಿ ಹಬ್ಬವನ್ನು ಆಚರಿಸಿ. ಹಬ್ಬದ ಆಚರಣೆಯಲ್ಲಿ ಬೆಳಕೇ ಪ್ರಧಾನವಾಗಿರಲಿ.

ಗಿಡ–ಮರಗಳು ಮತ್ತು ಪ್ರಾಣಿ–ಪಕ್ಷಿಗಳಿಗೆ ಯಾವುದೇ ಹಾನಿಯಾಗದಂತೆ ಎಚ್ಚರವಹಿಸಿ. ಶಾಶ್ವತ ಕುರುಡತನ, ಕಿವುಡುತನಗಳಿಗೆ ಎಡೆಮಾಡಿಕೊಡದಿರಿ. ಪಟಾಕಿಗಳನ್ನು ಖರೀದಿಸುವ ಮುನ್ನ ಹಸಿರು ಪಟಾಕಿಗಳ ಲೇಬಲ್‌ಗಳನ್ನು ಪರಿಶೀಲಿಸಿ ಖರೀದಿಸಲು ಕೋರಿದೆ.

ನಿಷೇಧ: ಶಿಕ್ಷಣ ಸಂಸ್ಥೆ, ಆಸ್ಪತ್ರೆ ಮತ್ತು ವೃದ್ಧಾಶ್ರಮಗಳಂತಹ ಸೂಕ್ಷ್ಮ ಪ್ರದೇಶಗಳ ಹತ್ತಿರ ಪಟಾಕಿ ಸಿಡಿಸುವುದನ್ನು ನಿಷೇಧಿಸಲಾಗಿದೆ. 125 ಡೆಸಿಬಲ್‌ಗೂ (ಶಬ್ದದ ಪ್ರಮಾಣ) ಮೇಲ್ಪಟ್ಟ ಪಟಾಕಿಗಳ ಸಿಡಿತವನ್ನು ನಿಷೇಧಿಸಲಾಗಿದೆ. ಪಟಾಕಿಗಳ ಸಿಡಿತದ ನಂತರ ಉತ್ಪತ್ತಿಯಾಗುವ ಘನ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯಬಾರದು. ಸ್ಥಳೀಯ ಸಂಸ್ಥೆಗಳು ನಿಗಧಿಪಡಿಸಿದ ಕಸವನ್ನು ವಿಲೇವಾರಿ ಮಾಡುವ ವಾಹನಗಳಿಗೆ ನೀಡಬೇಕು.

ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ 728/2015, ದಿನಾಂಕ 23–10–2018 ಮತ್ತು 31–10–2018 ನೀಡಿದ ತೀರ್ಪಿನ ನಿರ್ದೇಶನದಂತೆ ಹಸಿರು ಪಟಾಕಿಯನ್ನು ಹೊರತುಪಡಿಸಿ ಇನ್ಯಾವುದೇ ಪಟಾಕಿಗಳನ್ನು ಹಬ್ಬದ ಸಮಯದಲ್ಲಿ ರಾತ್ರಿ 08 ಗಂಟೆಯಿಂದ 10ವರೆಗೆ ಮಾತ್ರ ಪಟಾಕಿಗಳನ್ನು ಸ್ಫೋಟಿಸಲು ಅವಕಾಶವಿದೆ. ಉಳಿದ ಸಮಯದಲ್ಲಿ ಪಟಾಕಿಗಳ ಸ್ಫೋಟವನ್ನು ನಿಷೇಧಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಲೂಕು ಮಟ್ಟದ ಪ್ರಜಾಸೇವಾ ಆಂದೋಲನ ಸಭೆ

ಹಾವೇರಿ: ತಾಲೂಕು ಮಟ್ಟದ ಪ್ರಜಾ ಸೇವಾ ಆಂದೋಲನಾ ಸಭೆ ನ.7 ರಂದು ಹಾವೇರಿ ನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಸಕ್ಕರೆ ಮತ್ತು ಜವಳಿ ಸಚಿವರು ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ರುದ್ರಪ್ಪ ಮಾನಪ್ಪ ಲಮಾಣಿ ಅವರ ಅಧ್ಯಕ್ಷತೆಯಲ್ಲಿ ಜರುಗಲಿದೆ ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ತಿಳಿಸಿದ್ದಾರೆ.

ಈ ಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ, ತಮ್ಮ ಅಹವಾಲುಗಳನ್ನು ಸಲ್ಲಿಸಿ ಪರಿಹಾರ ಕಂಡುಕೊಳ್ಳಲು ಅನುಕೂಲವಾಗುವಂತೆ ಈಗಾಗಲೇ ಸಭೆ ನಡೆಯು

SAMALOCHANE RANEBENNURSUDDI
Kannada Daily Morning

ಸಮಾಲೋಚನೆ ಸುದ್ದಿ
ಕನ್ನಡ ದಿನ ಪತ್ರಿಕೆ

ಗುರುವಾರ 5 ನವೆಂಬರ್ 2026
5 NOVEMBER 2026

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ನ. 12ರ ಗಡುವು

ಆಕಾಂಕ್ಷಿಗಳಿಂದ ಅರ್ಜಿ ಆಹ್ವಾನ । ಪ್ರತಿ ಬ್ಲಾಕ್‌ನಿಂದ ಐವರ ಹೆಸರು ಶಿಫಾರಸ್ಸಿಗೆ ನಿರ್ಧಾರ

ಸಮಾಲೋಚನೆ ಸುದ್ದಿ ಹಾವೇರಿ

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ಬೂತ್ ಮಟ್ಟದಿಂದ ಬಲಪಡಿಸಲು ಸಂಘಟನ್ ಸೃಜನ ಅಭಿಯಾನ–2ರಡಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಆರಂಭಿಸಲಾಗಿದೆ. ಹಾವೇರಿ ನಗರ ಹಾಗೂ ಕರ್ಜಗಿ ಬ್ಲಾಕ್ ಕಾಂಗ್ರೆಸ್ ಸಮಿತಿಗಳ ಅಧ್ಯಕ್ಷ ಸ್ಥಾನಕ್ಕೆ ಆಸಕ್ತರಿಂದ ನ. 12ರೊಳಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಕೆಪಿಸಿಸಿ ವೀಕ್ಷಕ ಎಚ್.ಬಿ. ಮಂಜುನಾಥ ತಿಳಿಸಿದರು.

ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬ್ಲಾಕ್ ಅಧ್ಯಕ್ಷರ ಆಯ್ಕೆ ಸಂಬಂಧ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಂದ ಅಭಿಪ್ರಾಯ ಸಂಗ್ರಹಿಸಲಾಗುತ್ತಿದೆ. ಪ್ರತಿ ಬ್ಲಾಕ್‌ಗೆ ಭೇಟಿ ನೀಡಿ ಸಂಗ್ರಹಿಸಿದ ಅಭಿಪ್ರಾಯಗಳ ಆಧಾರದಲ್ಲಿ ಕೆಪಿಸಿಸಿಗೆ ವರದಿ ಸಲ್ಲಿಸಲಾಗುವುದು. 40ರಿಂದ 60 ವರ್ಷದೊಳಗಿನ ಆಸಕ್ತರು ಅರ್ಜಿ ಸಲ್ಲಿಸಬಹುದು. ಪ್ರತಿ ಬ್ಲಾಕ್‌ನಿಂದ ಕನಿಷ್ಠ ಮೂವರು ಹಾಗೂ ಗರಿಷ್ಠ ಐವರ ಹೆಸರುಗಳನ್ನು ಶಿಫಾರಸು ಮಾಡಲಾಗುತ್ತದೆ. ಅಂತಿಮ ಆಯ್ಕೆಯನ್ನು ಕೆಪಿಸಿಸಿ ಮಾಡಲಿದೆ ಎಂದರು.

ಕೆಪಿಸಿಸಿ ರಾಜ್ಯ ಕಾರ್ಯದರ್ಶಿ ಡಿ. ಬಸವರಾಜ ಮಾತನಾಡಿ, ರಾಜ್ಯದ 450 ಬ್ಲಾಕ್ ಕಾಂಗ್ರೆಸ್ ಸಮಿತಿಗಳಿಗೆ ಅಧ್ಯಕ್ಷರನ್ನು ನೇಮಕ ಮಾಡುವ ಪ್ರಕ್ರಿಯೆ ನಡೆಯುತ್ತಿದೆ. ಪಕ್ಷಕ್ಕಾಗಿ ದೀರ್ಘಕಾಲದಿಂದ ದುಡಿಯುತ್ತಿರುವವರಿಗೆ ಆದ್ಯತೆ ನೀಡುವುದರ ಜತೆಗೆ ಹೊಸ ಮುಖಗಳಿಗೂ ಅವಕಾಶ ಕಲ್ಪಿಸಲಾಗುವುದು. ಮಹಿಳೆಯರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸಾಮಾಜಿಕ ನ್ಯಾಯದಡಿ ಪ್ರಾತಿನಿಧ್ಯ ನೀಡಲಾಗುತ್ತದೆ ಎಂದರು.

ಕೆಪಿಸಿಸಿ ವೀಕ್ಷಕ ಟಿ.ಎಂ. ಶಾಹೀದ್ ಮಾತನಾಡಿ, ಗ್ರಾಮೀಣ ಭಾಗದ ಕಾರ್ಯಕರ್ತರಿಂದ ಪಾರದರ್ಶಕವಾಗಿ ಹಾಗೂ ಗೌಪ್ಯವಾಗಿ ಅಭಿಪ್ರಾಯ ಸಂಗ್ರಹಿಸಲಾಗುತ್ತಿದೆ. ಜಾತಿ ಮತ್ತು ಪ್ರಾದೇಶಿಕ ಪ್ರಾತಿನಿಧ್ಯಕ್ಕೂ ಆದ್ಯತೆ ನೀಡಿ ಅರ್ಹರ ಹೆಸರುಗಳನ್ನು ಹೈಕಮಾಂಡ್‌ಗೆ ಶಿಫಾರಸು ಮಾಡಲಾಗುವುದು ಎಂದರು.

ಪಕ್ಷದ ಜಿಲ್ಲಾಧ್ಯಕ್ಷ ಸಂಜೀವಕುಮಾರ ನೀರಲಗಿ, ಪ್ರಮುಖರಾದ ಪುಷ್ಪಾ ನಾಯಕ್, ಕೋಟ್ರೇಶಪ್ಪ ಬಸೇಗಣ್ಣಿ, ಎಂ.ಎಂ. ಹಿರೇಮಠ, ಎಂ.ಎಂ. ಮೈದೂರ, ಗುಡ್ಡನಗೌಡ ಅಂದಾನಿಗೌಡ್ರ, ಶಂಕರ್ ಮೆಹರವಾಡೆ, ಅತಾವುಲ್ಲ ಖಾಜಿ, ಮಹಾದೇವಗೌಡ ಗಾಜಿಗೌಡ್ರ, ಲತಾ ಹುಗ್ಗಿ ಮತ್ತಿತರರು ಸುದ್ದಿಗೋಷ್ಠಿಯಲ್ಲಿದ್ದರು.



ಎಸ್‌ಐಆರ್ ವಿರುದ್ಧ ಪ್ರತಿಭಟನೆ ಇಂದು...

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ವಿರೋಧಿಸಿ ನ. 5ರಂದು ಬೆಳಗ್ಗೆ 11ಕ್ಕೆ ಜಿಲ್ಲಾಧಿಕಾರಿ ಕಚೇರಿ ಎದುರು ಕಾಂಗ್ರೆಸ್‌ನಿಂದ ಪ್ರತಿಭಟನೆ ನಡೆಸಲು ನಿರ್ಧರಿಸಲಾಗಿದೆ. ಪ್ರತಿಭಟನೆಯಲ್ಲಿ ಜಿಲ್ಲೆಯ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಪಕ್ಷದ ಜಿಲ್ಲಾಧ್ಯಕ್ಷ ಸಂಜೀವಕುಮಾರ ನೀರಲಗಿ ತಿಳಿಸಿದರು. ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುತ್ತಿರುವುದು ಬಿಜೆಪಿಯೇ ಹೊರತು ಕಾಂಗ್ರೆಸ್ ಅಲ್ಲ. ಎಸ್‌ಐಆರ್ ಮೂಲಕ ಸಂವಿಧಾನದ ಆಶಯಗಳನ್ನು ರಕ್ಷಿಸುವ ಕೆಲಸ ನಡೆಯುತ್ತಿಲ್ಲ. ಇಂತಹ ಸಂದರ್ಭದಲ್ಲಿ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಎಂಬ ಹೆಸರಿನಲ್ಲಿ ಬಿಜೆಪಿ ಪ್ರತಿಭಟನೆ ನಡೆಸುತ್ತಿರುವುದು ಹಾಸ್ಯಾಸ್ಪದ ಎಂದು ಟೀಕಿಸಿದರು.

ವಿಜಯೇಂದ್ರ ಮಾತಿನಲ್ಲಿ ಹಿಡಿತ ಇಟ್ಟುಕೊಳ್ಳಲಿ...

ಕೆಪಿಸಿಸಿ ರಾಜ್ಯ ಕಾರ್ಯದರ್ಶಿ ಡಿ. ಬಸವರಾಜ, ದಾವಣಗೆರೆ ಬಂದಾಗ ಬಿ.ವೈ. ವಿಜಯೇಂದ್ರ ಕಾಂಗ್ರೆಸ್ ಬಗ್ಗೆ ಹಗುರವಾಗಿ ಮಾಡಿದ್ದಾರೆ. ಅವರು ತಮ್ಮ ಮಾತಿನಲ್ಲಿ ಹಿಡಿತ ಇಟ್ಟುಕೊಳ್ಳಬೇಕು. ಆತ ಮತ್ತು ಅವರ ತಂದೆ ಏನು ಅಂತಾ ರಾಜ್ಯದ ಜನತೆಗೆ ಗೊತ್ತಿದೆ. ವಿಜಯೇಂದ್ರ ಮಾಡಿದ ಫೋರ್ಜರಿ ಸಹಿಯಿಂದ ಬಿ.ಎಸ್. ಯಡಿಯೂರಪ್ಪ ಜೈಲಿಗೆ ಹೋಗಿ ಬಂದಿದ್ದಾರೆ. ಇದನ್ನು ವಿಜಯೇಂದ್ರ ತಿಳಿದುಕೊಳ್ಳಿ, ಅಲ್ಲದೆ ಕಾಂಗ್ರೆಸ್ ಕಾರ್ಯಕರ್ತರ ಕುರಿತು ಅವಹೇಳನಕಾರಿ ಹೇಳಿಕೆ ನೀಡಿರುವ ಛಲವಾದಿ ನಾರಾಯಣಸ್ವಾಮಿ ವಿರುದ್ಧ ಪೊಲೀಸರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ನಾರಾಯಣ ಸ್ವಾಮಿ ಈ ಹಿಂದೆ ಆರ್‌ಎಸ್‌ಎಸ್‌ನವರ ಚಡ್ಡಿಗಳನ್ನು ಹೊತ್ತು ಬಿಜೆಪಿಯವರ ಮನೆ ಮುಂದೆ ನಿಂತುಕೊಳ್ಳುತ್ತಿದ್ದ ವ್ಯಕ್ತಿ. ಈಗ ದೊಡ್ಡದಾಗಿ ಮಾತನಾಡುತ್ತಿದ್ದಾನೆ ಎಂದು ಟೀಕಿಸಿದರು.

ಡಿ.12ರಂದು ರಾಷ್ಟ್ರೀಯ ಲೋಕ ಅದಾಲತ್

ಹಾವೇರಿ:ನ.04(ಕರ್ನಾಟಕವಾರ್ತೆ): ಜಿಲ್ಲೆಯ ಜಿಲ್ಲಾ ಹಾಗೂ ತಾಲೂಕು ನ್ಯಾಯಾಲಯಗಳಲ್ಲಿ ರಾಷ್ಟ್ರೀಯಲೋಕಅದಾಲತ್‌ಬರುವಡಿಸೆಂಬರ್12ರಂದುಜರುಗಲಿದ್ದು,ಪ್ರಕರಣಗಳನ್ನುರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಂಡಾಗ, ಸಮಯ, ಹಣದ ಉಳಿತಾಯವಾಗುತ್ತದೆ ಹಾಗೂ ಸಂಬಂಧಗಳು ಕೆಡುವುದಿಲ್ಲ, ಜೊತೆಗೆ ನೆಮ್ಮದಿ ಕಾಣಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿರಾದಾರ ದೇವಿಂದ್ರಪ್ಪಾ ಎನ್. ಅವರು ತಿಳಿಸಿದರು.

ನಗರದ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದಲ್ಲಿ ಬುಧವಾರ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಲೋಕ ಅದಾಲತ್‌ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು, ಮೋಟರ್ ಅಪಘಾತಪ್ರಕರಣಗಳು,ಚೆಕ್ ಅಮಾನ್ಯದಪ್ರಕರಣಗಳು,ವಾಣಿಜ್ಯಪ್ರಕರಣಗಳು,ವ್ಯಾಜ್ಯಪೂರ್ವ ಪ್ರಕರಣಗಳು, ಸೇವಾ ಪ್ರಕರಣಗಳು, ರಾಜಿ ಆಗಬಲ್ಲ ಅಪರಾಧೀಕ ಪ್ರಕರಣಗಳು, ಗ್ರಾಹಕ ವ್ಯಾಜ್ಯ ಪ್ರಕರಣಗಳು, ಪಾಲುದಾರಿಕಾ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು ಹಾಗೂ ಇತರೆ ಸಿವಿಲ್ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಮಾಡಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ ಹಾಗೂ ನ್ಯಾಯಾಲಯದಲ್ಲಿ ಬಾಕಿ ಇರುವ ರಾಜಿ ಆಗಬಹುದಾದ ಪ್ರಕರಣಗಳನ್ನು ಲೋಕ ಅದಾಲತ್‌ನ ಮೂಲಕ ತಕ್ಷಣ ಪರಿಹಾರ ಪಡೆದುಕೊಳ್ಳಲು ಒಂದು ಸುವರ್ಣಾವಕಾಶವಾಗಿರುತ್ತದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.



ನ್ಯಾಯಾಧೀಶ ಬಿರಾದಾರ ದೇವಿಂದ್ರಪ್ಪಾ ಎನ್.

43 ಸಾವಿರ ಪ್ರಕರಣ ಬಾಕಿ: ಜಿಲ್ಲೆಯಲ್ಲಿ 43,974 ಪ್ರಕರಣಗಳು ಬಾಕಿ ಇದ್ದು, ಈ ಪೈಕಿ 3863 ಪ್ರಕರಣಗಳನ್ನು ರಾಜಿ ಸಂಧಾನಕ್ಕೆ ಗುರುತಿಸಲಾಗಿದೆ ಹಾಗೂ 947 ವಾಜ್ಯಪೂರ್ವ ಪ್ರಕರಣಗಳು ನೋಂದಣಿಯಾಗಿವೆ ಎಂದರು.

ವಿಶೇಷ ಲೋಕ ಅದಾಲತ್ : ಜಿಲ್ಲೆಯಲ್ಲಿ ನವಂಬರ್ 21ರಂದು ವಿಶೇಷ ಲೋಕ ಅದಾಲತ್ ಜರುಗಲಿದ್ದು, ಈ ವಿಶೇಷ ಲೋಕ ಅದಾಲತ್‌ನಲ್ಲಿ 138 ಎನ್‌ಐ ಕಾಯ್ದೆಗೆ ಸಂಬಂಧಿಸಿದಂತೆ ಪ್ರಕರಣಗಳನ್ನು ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಇತ್ಯರ್ಥ ಮಾಡಿಕೊಳ್ಳಬಹುದು ಎಂದು ತಿಳಿಸಿದರು.

ಮಧ್ಯಸ್ಥಿಕೆ–3.0 ಅಭಿಯಾನ ಸಹ ಮುಂದುವರೆದಿದ್ದು, ಈ ಅಭಿಯಾನದಲ್ಲಿ 24 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಧಾರವಾಡದ ಖಾಯಂ ಜನತಾ ನ್ಯಾಯಾಲಯ ಇದೆ. ಕಕ್ಷಿದಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಲೋಕ ಅದಾಲತ್‌ನ ಪ್ರಯೋಜನಗಳು: ನ್ಯಾಯಾಲಯಗಳಲ್ಲಿ ಉಭಯ ಪಕ್ಷದಾರರು ರಾಜೀ ಮಾಡಿಕೊಳ್ಳಲುಮಾರ್ಗದರ್ಶನಮಾಡಲಾಗುವುದು,ಇಬ್ಬರಿಗೂಒಪ್ಪಿಗೆಯಾಗುವಂತೆಪ್ರಕರಣವು ತೀರ್ಮಾನವಾಗುವುದರಿಂದ ಬಾಂಧವ್ಯವು ಉಳಿದು ವಿವಾದವು ತೀರ್ಮಾನವಾಗುತ್ತದೆ. ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು (ವ್ಯಾಜ್ಯಪೂರ್ವ ಪ್ರಕರಣಗಳು) ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ವ್ಯಾಜ್ಯಪೂರ್ವ ಪ್ರಕರಣಗಳಲ್ಲಿ ನ್ಯಾಯಾಲಯ ಶುಲ್ಕ (ಕೋರ್ಟ ಫೀ) ಕೊಡಬೇಕಾಗಿಲ್ಲ, ರಾಜೀ ಸಂಧಾನದ ಮೂಲಕ ಪ್ರಕರಣವನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯಕ್ಕೆ ಪಾವತಿಸಲಾದ ನ್ಯಾಯಾಲಯ ಶುಲ್ಕವನ್ನು ಪೂರ್ಣವಾಗಿ ಮರುಪಾವತಿಸಲಾಗುವುದು ಎಂದರು.

ಶೇ.50ರಷ್ಟು ರಿಯಾಯಿತಿ: ಸಂಚಾರ ನಿಯಮ ಉಲ್ಲಂಘನೆಯ ಬಾಕಿ ಪ್ರಕರಣಗಳ ದಂಡ ಮೊತ್ತ ಪಾವತಿಗೆ ಕರ್ನಾಟಕ ಸರ್ಕಾರ ಆದೇಶದಂತೆ ಶೇ.50ರಷ್ಟು ರಿಯಾಯತಿ ದರದಲ್ಲಿ ದಂಡ ಪಾವತಿಸಲು 1991 ರಿಂದ 2025 ಪ್ರಕರಣಗಳಿಗೆ ದಿನಾಂಕ 21–11–2026 ರಿಂದ ದಿನಾಂಕ 11–12–2026ರವರೆಗೆ ಅವಕಾಶ ನೀಡಲಾಗಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಪ್ರಯುಕ್ತ ನ.5 ರಿಂದ 13ರವರೆಗೆ ಜಿಲ್ಲೆಯ ಎಲ್ಲ ಶಾಲಾ–ಕಾಲೇಜುಗಳಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಆಚರಿಸಲಾಗುತ್ತಿದೆ. ಸುರಕ್ಷಿತ ಬಚಪನ್ ಅಭಿಯಾನ ಅಂಗವಾಗಿ ಆಯ್ದ ಶಾಲಾ–ಕಾಲೇಜುಗಳಲ್ಲಿ ಕಾನೂನು ಅರಿವು ಹಾಗೂ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥವಾದ ಪ್ರಕರಣಗಳ ಮೇಲೆ ಅಪೀಲ್ ಹೋಗಲು ಅವಕಾಶವಿರುವುದಿಲ್ಲ. ಕಾನೂನು ನೆರವಿಗಾಗಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಹಾವೇರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರ ಸಮಿತಿಗಳನ್ನು ಹಾಗೂ ಟೋಲ್ ಫ್ರಿ ಸಂಖ್ಯೆ 15100 ಸಂಪರ್ಕಿಸಬಹುದು ಎಂದು ತಿಳಿಸಿದರು. ಮಾಧ್ಯಮಗೋಷ್ಠಿಯಲ್ಲಿ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಸದಸ್ಯ ಕಾರ್ಯದರ್ಶಿಗಳಾದ ಶ್ರೀಮತಿ ಶ್ರೀಶೈಲಜಾ ಉಪಸ್ಥಿತರಿದ್ದರು.

ಬಾಲ್ಯ ವಿವಾಹ, ಮಕ್ಕಳ ಕಳ್ಳಸಾಗಣೆ ತಡೆಗೆ ಎಲ್ಲರೂ ಕೈಜೋಡಿಸಿ

ಹಾವೇರಿ: ಬಾಲ್ಯವಿವಾಹ, ಮಕ್ಕಳ ಅಪಹರಣ, ಮಾನವ ಕಳ್ಳಸಾಗಣೆ ಹಾಗೂ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಗೆ ಸಂಬಂಧಿಸಿದ ಕಾನೂನುಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದರೊಂದಿಗೆ ಇಂತಹ ಪ್ರಕರಣಗಳ ನಿಯಂತ್ರಣಕ್ಕೆ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಿರಾದಾರ ದೇವೇಂದ್ರಪ್ಪ ಎನ್. ಹೇಳಿದರು.

ನಗರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಬುಧವಾರ ಬೆಂಗಳೂರು ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಂಯುಕ್ತಾಶ್ರಯದಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಆಯೋಜಿಸಿದ್ದ ಬಾಲ್ಯವಿವಾಹ ನಿಷೇಧ ಕಾಯ್ದೆ–2006 ಹಾಗೂ ಪೋಕ್ಸೊ ಕಾಯ್ದೆ–2012 ಕುರಿತ ತರಬೇತಿ ಕಾರ್ಯಕ್ರಮ ಮತ್ತು ರಾಷ್ಟ್ರೀಯ ದತ್ತು ಮಾಸಾಚರಣೆ ಅಂಗವಾಗಿ ಕಾನೂನುಬದ್ಧ ದತ್ತು ಸ್ವೀಕಾರದ ಕುರಿತು ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳನ್ನು ದತ್ತು ಪಡೆಯುವ ಪದ್ಧತಿ ಹಿಂದಿನಿಂದಲೂ ರೂಢಿಯಲ್ಲಿದೆ. ಆದರೆ ಪ್ರಸ್ತುತ ದತ್ತು ಸ್ವೀಕಾರಕ್ಕೆ ಕಾನೂನಾತ್ಮಕ ಚೌಕಟ್ಟು ರೂಪುಗೊಂಡಿದ್ದು, ಸರ್ಕಾರ ನಿಗದಿಪಡಿಸಿರುವ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಅನಧಿಕೃತವಾಗಿ ಅಥವಾ ಕೇವಲ ಮಾತುಕತೆ, ಪತ್ರಗಳ ಮೂಲಕ ಮಕ್ಕಳನ್ನು ದತ್ತು ಪಡೆದರೆ ಮುಂದಿನ ದಿನಗಳಲ್ಲಿ ಆಸ್ತಿ ಹಕ್ಕು ಸೇರಿದಂತೆ ಹಲವು ಕಾನೂನು ಸಮಸ್ಯೆಗಳು ಎದುರಾಗಬಹುದು. ಆದ್ದರಿಂದ ಮಕ್ಕಳನ್ನು ದತ್ತು ಪಡೆಯುವವರು ಕಾನೂನುಬದ್ಧ ಪ್ರಕ್ರಿಯೆಯನ್ನೇ ಅನುಸರಿಸಬೇಕು ಎಂದರು. ಮಕ್ಕಳಿಲ್ಲದ ದಂಪತಿಗಳ ಆಸೆ ಹಾಗೂ ಹಣದ ಆಮಿಷವನ್ನು ದುರುಪಯೋಗಪಡಿಸಿಕೊಂಡು ಕೆಲವು ವ್ಯಕ್ತಿಗಳು ಮಕ್ಕಳನ್ನು ಅಕ್ರಮವಾಗಿ ಪಡೆದು ಮಾರಾಟ ಮಾಡುವ ಪ್ರಕರಣಗಳು ನಡೆಯುತ್ತಿವೆ. ಮಕ್ಕಳನ್ನು ಭಿಕ್ಷಾಟನೆ, ಲೈಂಗಿಕ ಶೋಷಣೆ ಹಾಗೂ ಅಂಗಾಂಗ ಕಳ್ಳಸಾಗಣೆಯಂತಹ ಅಕ್ರಮ ಚಟುವಟಿಕೆಗಳಿಗೆ ಬಳಸಿಕೊಳ್ಳುವ ಅಪಾಯವಿದೆ. ಇಂತಹ ಅಪರಾಧಗಳನ್ನು ತಡೆಗಟ್ಟಲು ಸಾರ್ವಜನಿಕರು ಜಾಗೃತರಾಗಬೇಕು ಎಂದರು.



ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಡಾ. ನಾಗರಾಜ ಎಲ್. ಮಾತನಾಡಿ, ದತ್ತು ಸ್ವೀಕಾರವು ಕಾನೂನುಬದ್ಧವಾಗಿ ನಡೆಯುವುದು ಅತ್ಯಂತ ಮುಖ್ಯ. ಅನಧಿಕೃತವಾಗಿ ಮಕ್ಕಳನ್ನು ದತ್ತು ಪಡೆಯುವುದರಿಂದ ಮುಂದೆ ಹಲವು ಕಾನೂನು ತೊಡಕುಗಳು ಉಂಟಾಗಬಹುದು. ಆದ್ದರಿಂದ ಸರ್ಕಾರದ ನಿಯಮಾನುಸಾರ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮೂಲಕ ದತ್ತು ಪ್ರಕ್ರಿಯೆ ಪೂರ್ಣಗೊಳಿಸಬೇಕು ಎಂದು ಸಲಹೆ ನೀಡಿದರು.

ಮಕ್ಕಳ ಅಪಹರಣ, ಮಾನವ ಕಳ್ಳಸಾಗಣೆ, ಭಿಕ್ಷಾಟನೆಗೆ ಮಕ್ಕಳನ್ನು ಬಳಸಿಕೊಳ್ಳುವುದು ಹಾಗೂ ಲೈಂಗಿಕ ಶೋಷಣೆಯಂತಹ ಅಪರಾಧಗಳ ಕುರಿತು ಸಮಾಜದಲ್ಲಿ ಜಾಗೃತಿ ಮೂಡಿಸಬೇಕು. ಮಕ್ಕಳು ಕಾಣೆಯಾದಾಗ ಅಥವಾ ಅಸುರಕ್ಷಿತ ಸ್ಥಿತಿಯಲ್ಲಿ ಕಂಡುಬಂದಾಗ ತಕ್ಷಣ ಮಕ್ಕಳ ರಕ್ಷಣಾ ಘಟಕಕ್ಕೆ ಮಾಹಿತಿ ನೀಡಬೇಕು. ಮಕ್ಕಳ ಸುರಕ್ಷತೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಶಿಕ್ಷಕರು, ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಗ್ರಾಮಮಟ್ಟದ ಅಧಿಕಾರಿಗಳ ಪಾತ್ರ ಮಹತ್ವದ್ದಾಗಿದೆ ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಯಶ್ರೀ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಗ್ರಾಮ ಮತ್ತು ಶಾಲಾ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ಕುರಿತು ಅರಿವು ಮೂಡಿಸಿ ಬಾಲ್ಯವಿವಾಹ ಮುಕ್ತ ಹಾವೇರಿ ಜಿಲ್ಲೆಯ ನಿರ್ಮಾಣಕ್ಕೆ ಎಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

ಮಕ್ಕಳನ್ನು ಅನಧಿಕೃತವಾಗಿ ಖರೀದಿಸುವುದು ಅಥವಾ ಮಾರಾಟ ಮಾಡುವುದು ಕಾನೂನುಬಾಹಿರ ಅಪರಾಧವಾಗಿದೆ. ಬಾಲನ್ಯಾಯ (ಮಕ್ಕಳ ಆರೈಕೆ ಮತ್ತು ರಕ್ಷಣೆ) ಕಾಯ್ದೆ–2015ರ ಕಲಂ 80 ಮತ್ತು 81ರಡಿ ಇಂತಹ ಕ

ಸಮಾಲೋಚನೆ ಸುದ್ದಿ
ಕನ್ನಡ ದಿನ ಪತ್ರಿಕೆ
SAMALOCHANE RANEBENNURSUDDI
Kannada Daily Morning

ನ.18 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

ಹಾವೇರಿ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಭಾರತ ಸರ್ಕಾರದ ಯುವ ಕಾರ್ಯ ಮತ್ತು ಕ್ರೀಡಾ ಸಚಿವಾಲಯದ ಅಡಿಯಲ್ಲಿ ಬರುವ ಮೇರಾ ಯುವ ಭಾರತ್ ಸಹಯೋಗದಲ್ಲಿ 2026–27ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ ಹಾವೇರಿ ನಗರದ ಜಿ.ಹೆಚ್.ಕಾಲೇಜಿನ ಆಡಿಟೋರಿಯಂ, ನ.18 ರಂದು ಬೆಳಗ್ಗೆ 9 ಗಂಟೆಗೆ ಜರುಗಲಿದೆ.

ಜಾನಪದ ನೃತ್ಯ ತಂಡ, ಜಾನಪದ ಗೀತೆ(ತಂಡ), ಚಿತ್ರಕಲೆ, ಕವಿತೆ ಬರೆಯುವುದು ಹಾಗೂ ಬೀದಿನಾಟಕ ಸ್ಪರ್ಧೆಗಳು ಜರುಗಲಿದೆ. ಯುವಜನೋತ್ಸವ ಸ್ಪರ್ಧೆಗಳಲ್ಲಿ 15 ರಿಂದ 29ರ ವಯೋಮಿತಿಯಲ್ಲಿರುವ ಹಾವೇರಿ ಜಿಲ್ಲೆಯ ಎಲ್ಲಾ ಯುವಕ, ಯುವತಿಯರು, ಸಂಘ ಸಂಸ್ಥೆಗಳ ಸದಸ್ಯರು,ಶಾಲಾ–ಕಾಲೇಜುಗಳವಿದ್ಯಾರ್ಥಿ,ವಿದ್ಯಾರ್ಥಿನಿಯರುಭಾಗವಹಿಸಬಹುದಾಗಿರುತ್ತದೆ.

ರಾಷ್ಟ್ರ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಸತತವಾಗಿ ಮೂರು ವರ್ಷಗಳು ಭಾಗವಹಿಸಿದ್ದು ಅಥವಾ ಒಂದು ಬಾರಿ ಪದಕ ಪಡೆದಿದ್ದರೆ, ಅಂತಹ ಯುವ ಜನರು ಭಾಗವಹಿಸುವಂತಿಲ್ಲ. ಸ್ಪರ್ಧೆಗಳು ಯುವಕ ಮತ್ತು ಯುವತಿಯರಿಗೆ ಪ್ರತ್ಯೇಕವಾಗಿರುವುದಿಲ್ಲ. ರಂಗಸ್ಥಳದ ಮೇಲೆ ಜೀವಂತ ಪ್ರಾಣಿ, ಬೆಂಕಿ ಹಾಗೂ ಅಪಾಯಕಾರಿ ವಸ್ತುಗಳನ್ನೊಳಗೊಂಡ ಪ್ರದರ್ಶನಹಾಗೂಅಪಾಯಕಾರಿಸಾಹಸಗಳನ್ನೊಳಗೊಂಡಪ್ರದರ್ಶನಕ್ಕೆಅವಕಾಶವಿರುವುದಿಲ್ಲ.

ಸ್ಪರ್ಧೆಯಲ್ಲಿ ಭಾಗವಹಿಸಿದ ವಿಜೇತರಿಗೆ ನಗದು ಬಹುಮಾನ, ವಿಜಯ ಫಲಕ ಮತ್ತು ಪ್ರಶಸ್ತಿಗಳನ್ನು ನೀಡಲಾಗುವುದು. ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಸ್ಪರ್ಧಿಗಳು ಮಾತ್ರ ರಾಜ್ಯ ಮಟ್ಟದ ಯುವಜನೋತ್ಸವದಲ್ಲಿ ಸ್ಪರ್ಧಿಸುವ ಅವಕಾಶವಿರುತ್ತದೆ. ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ವಿಜೇತರಿಗೆ ರಾಷ್ಟ್ರ ಮಟ್ಟದಲ್ಲಿ ಸ್ಪರ್ಧಿಸುವ ಅವಕಾಶವಿರುತ್ತದೆ.

ಸ್ಪರ್ಧಾ ಕಾರ್ಯಕ್ರಮಕ್ಕೆ ಸ್ಪರ್ಧಿಗಳು ದಿನಾಂಕ 18–11–2026ರಂದು ಬೆಳಿಗ್ಗೆ 9 ಗಂಟೆಗೆ ಹಾವೇರಿಯ ಜಿ.ಹೆಚ್. ಕಾಲೇಜ್‌ನ ಆಡಿಟೋರಿಯಂ ಆವರಣದಲ್ಲಿ ನೊಂದಾವಣೆ ಮಾಡಿಕೊಳ್ಳಬೇಕು. ಪಕ್ಕವಾದ್ಯ, ರಂಗಸಜ್ಜಿಕೆ, ವೇಷಭೂಷಣ, ಇತ್ಯಾದಿ ಪೂರಕ ಉಪಕರಣಗಳನ್ನು ಸ್ಪರ್ಧಿಗಳೇ ಸಿದ್ಧಪಡಿಸಿಕೊಳ್ಳಬೇಕು. ಹಾವೇರಿ ಜಿಲ್ಲೆಯ ಸ್ಪರ್ಧಾಳುಗಳು ಮಾತ್ರ ಭಾಗವಹಿಸಬಹುದಾಗಿರುತ್ತದೆ. ತೀರ್ಪುಗಾರರ ತೀರ್ಮಾನವೇ ಅಂತಿಮವಾಗಿರುತ್ತದೆ.

ನೊಂದಾವಣೆ ಸಮಯದಲ್ಲಿ ವಯಸ್ಸಿನ ದೃಢೀಕರಣಕ್ಕಾಗಿ ಆಧಾರ್ ಕಾರ್ಡ್/ ಎಸ್.ಎಸ್.ಎಲ್.ಸಿ. ಅಂಕ ಪಟ್ಟಿ/ ಜನನ ಪ್ರಮಾಣ ಪತ್ರ ಇವುಗಳಲ್ಲಿ ಯಾವುದಾರೂ ಒಂದು ದಾಖಲೆಯನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಭಾಗವಹಿಸುವವರು ಹಾವೇರಿ ಜಿಲ್ಲೆಯವರಾಗಿರಬೇಕು/ಅನ್ಯ ಜಿಲ್ಲೆಯವರು ಭಾಗವಹಿಸಿದಲ್ಲಿ ಹಾವೇರಿ ಜಿಲ್ಲೆಯಲ್ಲಿ ವ್ಯಾಸಂಗ ಮಾಡುತ್ತಿರುವ/ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ ಸಂಸ್ಥೆಯಿಂದ ಗುರುತಿನ ಚೀಟಿ/ದೃಢೀಕರಣ ಪತ್ರ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹಾವೇರಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ದೂ.08375–232443 ಸಂಖ್ಯೆ ಸಂಪರ್ಕಿಸಬಹುದೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಯಂತಿ ಆಚರಣೆ ಪೂರ್ವಭಾವಿ ಸಭೆ

ಹಾವೇರಿ: ವೀರವನಿತೆ ಒನಕೆ ಓಬವ್ವ ಜಯಂತಿ ಆಚರಣೆ ಪೂರ್ವಭಾವಿ ಸಭೆ ನ.5 ರಂದು ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಕೋರ್ಟ್ ಹಾಲ್‌ನಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ವಿಭಾಗ ಮಟ್ಟದ ಯೋಗಾಸನ ಸ್ಪರ್ಧೆ

ಹಾವೇರಿ: ಬೆಳಗಾವಿ ವಿಭಾಗ ಮಟ್ಟದ 14/17 ವಯೋಮಿತಿಯ ಬಾಲಕ ಮತ್ತು ಬಾಲಕಿಯರ ಯೋಗಾಸನ ಸ್ಪರ್ಧೆ ನ.6 ಮತ್ತು 7 ರಂದು ಎರಡು ದಿನ ಹಾವೇರಿ ನಗರದ ವಾಲ್ಮೀಕಿ ಭವನದಲ್ಲಿ ನಡೆಯಲಿದ್ದು, ಈ ಸ್ಪರ್ಧೆಯ ಉದ್ಘಾಟನಾ ಸಮಾರಂಭ ನ.6 ರಂದು ಸಾಯಂಕಾಲ 4 ಗಂಟೆಗೆ ಜರುಗಲಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಪರಿಚಿತ ವ್ಯಕ್ತಿ ಶವ ಪತ್ತೆ

ಹಾವೇರಿ: ಮುಗದ–ಕಂಬಾರಗಣವಿ ರೇಲ್ವೆ ನಿಲ್ದಾಣಗಳ ಮಧ್ಯೆ 65 ರಿಂದ 70 ವರ್ಷದ ಪುರುಷ ರೈಲುಗಾಡಿಯಿಂದ ಬಿದ್ದು ಮೃತಪಟ್ಟಿದ್ದು, ಮೃತರ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿರುವುದಿಲ್ಲ. ಪ್ರಕರಣ ದಾಖಲಿಸಿಕೊಂಡು ತನಿಖೆಕೈಗೊಳ್ಳಲಾಗಿದೆ.

ಮೃತ ವ್ಯಕ್ತಿ ವಾರಸುದಾರರು ಇದ್ದರೆ ಹುಬ್ಬಳ್ಳಿ ರೈಲ್ವೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 0836–2384751 ಅಥವಾ ಮೊ.9480802126 ಸಂಪರ್ಕಿಸಬಹುದೆಂದು ಹುಬ್ಬಳ್ಳಿ ರೈಲ್ವೆ ಪೊಲೀಸ್ ಠಾಣೆ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗುತ್ತಿಗೆ ಆಧಾರದ ನೇಮಕಾತಿಗೆ ಅರ್ಜಿ

ಹಾವೇರಿ: ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ 2026–27 ಸಾಲಿಗೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಅಡಿ ಜಿಲ್ಲೆಯಲ್ಲಿ ಮಂಜೂರಾಗಿ ಖಾಲಿ ಇರುವ ವಿವಿಧ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವೈದ್ಯಾಧಿಕಾರಿಗಳು (ಎಂ.ಬಿ.ಬಿ.ಎಸ್)–13,ಪ್ರಯೋಗಶಾಲಾತಂತ್ರಜ್ಞರು–08,ಶುಶ್ರೂಷಾಧಿಕಾರಿಗಳು–20, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು–10, ಸೈಕಾಲಜಿಸ್ಟ್–01 , ಆಡಿಯೋಲೊಜಿಸ್ಟ್/ ಸ್ಪೀಚ್ ಥೆರಪಿಸ್ಟ್–01, ಆಪ್ಟೋಮೆಟ್ರಿಸ್ಟ್–01, ಕ್ಷ–ಕಿರಣ ತಂತ್ರಜ್ಞರು–04 ಹಾಗೂ ಫಿಜಿಯೋಥೆರಫಿಸ್ಟ–01 ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಈ ಗುತ್ತಿಗೆ ಆಧಾರದ ನೇಮಕಾತಿಯು ಮೆರಿಟ್ ಕಮ್ ರೋಷ್ಟರ್ ಆಧಾರದ ಮೇಲೆ ಮಾಡಿಕೊಳ್ಳಲಾಗುವುದು, ಅರ್ಹ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳು ದಿನಾಂಕ 05–11–2026 ರಿಂದ ದಿನಾಂಕ 16–11–2026 ರ ಸಂಜೆ 05–30 ರೊಳಗೆ ಖುದ್ದಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಯನ್ನು ಹಾವೇರಿ ಜಿಲ್ಲೆಯ ಜಿಲ್ಲಾ ಜಾಲತಾಣ (ತಿತಿತಿ.ಛಿಚಿತಜಡಿ.ಟುಛಿ.ಟಿ) ದಲ್ಲಿ ಹಾಗೂ ಜಿಲ್ಲಾ ಯೋಜನಾ ನಿರ್ವಹಣಾ ಘಟಕ, ಜಿಲ್ಲಾಡಳಿತ ಭವನ ದೇವಗಿರಿ (ಆರೋಗ್ಯ ಇಲಾಖೆ) ಹಾವೇರಿ ಕಚೇರಿ ಅವಧಿಯಲ್ಲಿ ಪಡೆಯಬಹುದು ಹಾಗೂ ಕಚೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಉಪಾಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೀಪಾವಳಿ ನೆಪದಲ್ಲಿ ಇಸ್ಪೀಟು, ಜೂಜಾಟ ನಡೆಸಿದರೆ ಕಠಿಣ ಕ್ರಮ

ಗಂಗಾವತಿ: ದೀಪಾವಳಿ ಹಬ್ಬದ ನೆಪದಲ್ಲಿ ಸಾರ್ವಜನಿಕ ಸ್ಥಳಗಳು, ರಸ್ತೆ ಬದಿ, ಹೋಟೆಲ್‌ಗಳ ಹಿಂಭಾಗ ಸೇರಿದಂತೆ ನಗರದ ಯಾವುದೇ ಪ್ರದೇಶದಲ್ಲಿ ಇಸ್ಪೀಟು ಹಾಗೂ ಹಣವನ್ನು ಪಣಕ್ಕಿಟ್ಟು ಜೂಜಾಟ ನಡೆಸುವುದು ಕಂಡುಬಂದರೆ ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಗಂಗಾವತಿ ನಗರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಾಶ ಯಾತನೂರು ಎಚ್ಚರಿಕೆ ನೀಡಿದ್ದಾರೆ. ದೀಪಾವಳಿ ಹಬ್ಬದ ಸಂದರ್ಭದಲ್ಲಿ ಕೆಲವರು ಗುಂಪು ಸೇರಿಕೊಂಡು ಇಸ್ಪೀಟು ಹಾಗೂ ವಿವಿಧ ರೀತಿಯ ಜೂಜಾಟಗಳಲ್ಲಿ ತೊಡಗುವ ಸಾಧ್ಯತೆ ಇರುವುದರಿಂದ ಪೊಲೀಸ್ ಇಲಾಖೆ ನಗರದಾದ್ಯಂತ ಕಟ್ಟುನಿಟ್ಟಿನ ನಿಗಾ ವಹಿಸಲಿದೆ. ಸಾರ್ವಜನಿಕ ಸ್ಥಳಗಳು, ರಸ್ತೆ, ಖಾಲಿ ಜಾಗ, ಹೋಟೆಲ್‌ಗಳ ಹಿಂಭಾಗ ಸೇರಿದಂತೆ ಯಾವುದೇ ಪ್ರದೇಶದಲ್ಲಿ ಹಣವನ್ನು ಪಣಕ್ಕಿಟ್ಟು ಇಸ್ಪೀಟು ಆಡಬಾರದು. ಇಂತಹ ಅಕ್ರಮ ಚಟುವಟಿಕೆಗಳಿಗೆ ಸ್ಥಳಾವಕಾಶ ಕಲ್ಪಿಸುವವರ ವಿರುದ್ಧವೂ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ. ಅದೇ ರೀತಿ ದೀಪಾವಳಿ ಸಂದರ್ಭದಲ್ಲಿ ಪಟಾಕಿ ಸಿಡಿಸುವಾಗ ಸಾರ್ವಜನಿಕರಿಗೆ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ವಾಹನ ಸಂಚಾರಕ್ಕೆ ಅಡ್ಡಿಯಾಗುವ ರೀತಿಯಲ್ಲಿ ರಸ್ತೆಗಳಲ್ಲಿ ಪಟಾಕಿ ಸಿಡಿಸಬಾರದು. ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವುದು, ಅತಿವೇಗ ಹಾಗೂ ಅಜಾಗರೂಕತೆಯಿಂದ ವಾಹನ ಚಲಾಯಿಸುವುದನ್ನು ತಪ್ಪಿಸಬೇಕು. ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಸಂಚಾರಿ ನಿಯಮಗಳನ್ನು ಪಾಲಿಸಬೇಕು ಎಂದು ಸೂಚಿಸಿದ್ದಾರೆ.

ದೀಪಾವಳಿ ಹಬ್ಬವನ್ನು ಪ್ರತಿಯೊಬ್ಬರೂ ಶಾಂತಿ, ಸೌಹಾರ್ದತೆ ಹಾಗೂ ಕಾನೂನು ಪಾಲನೆಯೊಂದಿಗೆ ಆಚರಿಸಬೇಕು. ನಗರದಲ್ಲಿ ಎಲ್ಲಿಯಾದರೂ ಅಕ್ರಮ ಇಸ್ಪೀಟು, ಜೂಜಾಟಅಥವಾಅನುಮಾನಾಸ್ಪದಚಟುವಟಿಕೆಗಳುಕಂಡುಬಂದಲ್ಲಿಸಾರ್ವಜನಿಕರು ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕು. ಸಾರ್ವಜನಿಕರ ಸುರಕ್ಷತೆ ಹಾಗೂ ನಗರದಲ್ಲಿ ಶಾಂತಿ ಕಾಪಾಡುವುದು ಪೊಲೀಸ್ ಇಲಾಖೆಯ ಆದ್ಯತೆಯಾಗಿದ್ದು, ಕಾನೂನು ಉಲ್ಲಂಘಿಸುವವರ ವಿರುದ್ಧ ಯಾವುದೇ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲಾಗುವುದು ಎಂದು ಪಿಐ ಪ್ರಕಾಶ ಯಾತನೂರು ಎಚ್ಚರಿಕೆ ನೀಡಿದ್ದಾರೆ.

ಚಳಗೇರಾ ಹಿರೇಮಠದಲ್ಲಿ ಭಕ್ತಿಭಾವದ ಪುಣ್ಯಸ್ಮರಣೆ, ನೂತನ ಮಹಾರಥೋತ್ಸವ

ಗಂಗಾವತಿ: ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲೂಕಿನ ಚಳಗೇರಾ ಗ್ರಾಮದ ಹಿರೇಮಠದ ವತಿಯಿಂದ ಲಿಂ. ಷ.ಬ್ರ. 108 ಶ್ರೀ ವಿರೂಪಾಕ್ಷಲಿಂಗ ಶಿವಾಚಾರ್ಯ ಮಹಾಸ್ವಾಮಿಗಳ ಪುಣ್ಯಸ್ಮರಣೆ, ನೂತನ ಮಹಾರಥೋತ್ಸವದ ಉದ್ಘಾಟನೆ ಹಾಗೂ ಶ್ರೀಮದ್ ಜಗದ್ಗುರು ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವವನ್ನು ಭಕ್ತಿಭಾವದಿಂದ ಆಯೋಜಿಸಲಾಗಿತ್ತು.



ಕಾರ್ಯಕ್ರಮದಲ್ಲಿಗಂಗಾವತಿವಿಧಾನಸಭಾಕ್ಷೇತ್ರದ ನಿಕಟಪೂರ್ವ ಶಾಸಕ ಪರಣ್ಣ ಮುನವಳ್ಳಿ ಅವರು ಭಾಗವಹಿಸಿ,ಜಗದ್ಗುರುಗಳಆಶೀರ್ವಾದಪಡೆದರು. ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶ್ರೀಗಳ ದರ್ಶನ ಪಡೆದು ಭಕ್ತಿ ಸಮರ್ಪಿಸಿದರು. ಈ ಸಂದರ್ಭದಲ್ಲಿ ಶ್ರೀಶೈಲ ಜಗದ್ಗುರು ಶ್ರೀ ಶ್ರೀ ಶ್ರೀ 1008 ಡಾ. ಚನ್ನಸಿದ್ದರಾಮಯ್ಯ ಪಂಡಿತರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, ಉಜ್ಜಯಿನಿ ಜಗದ್ಗುರು ಶ್ರೀ ಶ್ರೀ ಶ್ರೀ 1008 ಸಿದ್ದಲಿಂಗರಾಜ ದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಕಾಶಿ ಜಗದ್ಗುರು ಶ್ರೀ ಶ್ರೀ ಶ್ರೀ 1008 ಡಾ. ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಭಕ್ತರಿಗೆ ಆಶೀರ್ವಚನ ನೀಡಿದರು.

ಗಂಗಾವತಿ–ಕಂಪ್ಲಿ ಹೆದ್ದಾರಿ ಪಕ್ಕದಲ್ಲಿ ಒಡೆದ ಪೈಪ್‌ಲೈನ್

ಗಂಗಾವತಿ: ಇಲ್ಲಿನ ಗಂಗಾವತಿ–ಕಂಪ್ಲಿ ಮುಖ್ಯ ಹೆದ್ದಾರಿಯ ಪಕ್ಕದಲ್ಲೇ ಹಾದುಹೋಗಿರುವ ಪ್ರಮುಖ ನೀರಿನ ಪೈಪ್‌ಲೈನ್ ಮಂಗಳವಾರ ಬೆಳಿಗಿನ ಜಾವ ಹಾನಿಗೊಳಗಾಗಿದ್ದು, ರಸ್ತೆಯುದ್ದಕ್ಕೂ ಅಪಾರ ಪ್ರಮಾಣದ ನೀರು ಹರಿದು ವಾಹನ ಸಂಚಾರಕ್ಕೆ ತೀವ್ರ ಅಡಚಣೆ ಉಂಟಾಗಿತ್ತು.

ಹೆದ್ದಾರಿಯ ಬದಿಯಲ್ಲೇ ಅಳವಡಿಸಲಾಗಿರುವ ಪೈಪ್‌ಲೈನ್ ಒಡೆದ ಪರಿಣಾಮ ರಸ್ತೆಯ ಮೇಲೆ ನೀರು ನಿಂತು ಕೆರೆಯಂತಾಗಿದ್ದು, ರಸ್ತೆಯ ಅಂಚಿನ ಮಣ್ಣು ಕೊಚ್ಚಿಹೋಗಿ ರಸ್ತೆ ಹಾಳಾಗುವ ಆತಂಕ ಎದುರಾಗಿದ್ದು, ಹೆದ್ದಾರಿಯಲ್ಲಿ ಸಂಚರಿಸುವ ದ್ವಿಚಕ್ರ ವಾಹನ ಸವಾರರುಹಾಗೂಭಾರಿವಾಹನಗಳಚಾಲಕರು ಸಂಚರಿಸಲು ಹರಸಾಹಸ ಪಡುವಂತಾಯಿತು. ಒಣ ಹಾಕಿದ್ದ ರೈತರ ಭತ್ತ ನೀರಲ್ಲಿ ತೆ–ೋಯ್ದು ಹೋಗಿದೆ. ಕೆಲ ಮನೆಗಳಿಗೂ ನೀರು ನುಗ್ಗಿದೆ ಎನ್ನಲಾಗಿದೆ. ಒಂದೆಡೆ ಕುಡಿಯುವ ನೀರಿಗೆ ಹಾಹಾಕಾರವಿರುವ ಸಂದರ್ಭದಲ್ಲಿ, ಪೈಪ್‌ಲೈನ್ ಸೋರಿಕೆಯಿಂದಾಗಿ ಸಾವಿರಾರು ಲೀಟರ್ ಅಮೂಲ್ಯ ನೀರು ಚರಂಡಿ ಪಾಲಾಗುತ್ತಿರುವುದಕ್ಕೆ ಸ್ಥಳೀಯರ ಅಸಮಧಾನ ವ್ಯಕ್ತಪಡಿಸಿದ್ದಾರೆ.

ವಿಷಯ ತಿಳಿದು ಸ್ಥಳಕ್ಕೆ ಧಾವಿಸಿದ ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ರೆಡ್ಡಿ ಶ್ರೀನಿವಾಸ ಅವರು, ನೀರಾವರಿ ಇಲ್ಲಾಖೆಯ ಸಹಾಯಕ ಅಭಿಯಂತರ ಶ್ರೀಧರ, ಜಾಕ್ ವೆಲ್ ನಿರ್ವಹಣೆಗಾರ ಶರಣಪ್ಪ ಅವರ ಗಮನಕ್ಕೆ ತಂದು ನೀರು ಸರಬರಾಜು ಸ್ಥಗಿತಗೊಳಿಸಿ ಜಾಕ್ ವೆಲ್ ದುರಸ್ತಿಗೆ ಮುಂದಾಗಿದ್ದು, ಸದ್ಯಕ್ಕೆ ಲೀಕೇಜ್ ನಿಂತಿದೆ.

ಈ ವೇಳೆ ಗ್ರಾಮ ಮುಖಂಡರು, ಗ್ರಾ.ಪಂ.ಮಾಜಿ ಅಧ್ಯಕ್ಷರು, ಸದಸ್ಯರು ಸ್ಥಳದಲ್ಲಿದ್ದು ಜಾಕ್ ವೆಲ್ ದುರಸ್ತಿಗೆ ಸಹಕರಿಸಿದರು.



ನವಲಗುಂದದ ಕುಮಾರಗಪ್ಪ ಕ್ರಾಸ್ ಬಳಿ ಭೀಕರ ಅಪಘಾತ: 24 ವರ್ಷದ ವಿಶಾಲ್ ಜೈಚಂದ್ರನ್ ಸಾವು

ನವಲಗುಂದ: ರಾಷ್ಟ್ರೀಯ ಹೆದ್ದಾರಿ 218ರ ಕುಮಾರಗಪ್ಪ ಕ್ರಾಸ್ ಬಳಿ ಬುಧವಾರ ಸಾಯಂಕಾಲ ಸುಮಾರು 5:00 ಗಂಟೆಗೆ ಬೈಕ್ ಮತ್ತು ಲಾರಿ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ 24 ವರ್ಷದ ಯುವಕ ಮೃತಪಟ್ಟ ಘಟನೆ ನಡೆದಿದೆ.



ಮೃತ ಯುವಕನನ್ನು ಕೇರಳ ರಾಜ್ಯದ ತಿರುವನಂತಪುರಂ ಮೂಲದ ವಿಶಾಲ್ ಜೈಚಂದ್ರನ್ (24) ಎಂದು ಗುರುತಿಸಲಾಗಿದೆ.

ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ವಿಶಾಲ್ ಅವರನ್ನು ತಕ್ಷಣ ನವಲಗುಂದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿತ್ತು. ಆದರೆ ದುರದೃಷ್ಟವಶಾತ್ ಚಿಕಿತ್ಸೆ ಫಲಕಾರಿಯಾಗದೆ ಅವರು ಕೊನೆಯುಸಿರೆಳೆದಿದ್ದಾರೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ನವಲಗುಂದ ಪೊಲೀಸ್ ಠಾಣೆಯ ಪಿಎಸ್‌ಐ ಚಂದ್ರಶೇಖರ ಸಾಗನೂರ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಮತದಾರರ ಪಟ್ಟಿ ಪರಿಷ್ಕರಣೆ ಅಕ್ರಮ: ಸರನಾಡಗೌಡರ

ನವಲಗುಂದ : ಕೇಂದ್ರ ಚುನಾವಣಾ ಆಯೋಗದ ಎಸ್.ಐ.ಆರ್ ಪ್ರಕ್ರಿಯೆಯಡಿ ಲಕ್ಷಾಂತರ ಅರ್ಹ ಮತದಾರರ ಹೆಸರನ್ನು ಬೇಕಾಬಿಟ್ಟಿಯಾಗಿ ಕೈಬಿಟ್ಟಿರುವುದನ್ನು ಖಂಡಿಸುತ್ತೇವೆ ಎಂದು ನವಲಗುಂದ ತಾಲೂಕು ನಾಗರೀಕ ಮತಕಾವಲು ಸಮಿತಿಯ ಸಂಚಾಲಕಿ ಶ್ರೀಮತಿ ಸವಿತಾ ಸರನಾಡಗೌಡರ ತಿಳಿಸಿದ್ದಾರೆ.

ಈ ಕುರಿತು ತಹಶೀಲ್ದಾರ ಕಚೇರಿಯ ಶಿರಸ್ತೇದಾರ ಗಣೇಶ ಚಳ್ಳಿಕೇರಿ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ನೀಡಿ ಮಾತನಾಡಿದ ಅವರು

"ನಮ್ಮ ಸಮಿತಿಯು ರಾಜ್ಯದ ಹಲವೆಡೆ ನಡೆಸಿದ 'ಬೂತ್ ಪರಿಶೋಧನೆ'ಯಲ್ಲಿ ನೂರಾರು ಜನ ಮತದಾರರು ಅಲ್ಲೇ ವಾಸವಿದ್ದರೂ ಅವರನ್ನು 'ಶಿಫ್ಟೆಡ್' ಎಂದು ಡಿಲೀಟ್ ಮಾಡಲಾಗಿದೆ. ಬದುಕಿರುವವರನ್ನೇಸತ್ತಿದ್ದಾರೆಎಂದುವರದಿಮಾಡಲಾಗಿದೆ.ಬೆಳೆಯುತ್ತಿರುವಬೆಂಗಳೂರಿನಲ್ಲೇ ಶೇ. 43 ರಷ್ಟು ಮತದಾರರು ಕಾಣೆಯಾಗಲು ಹೇಗೆ ಸಾಧ್ಯ? ಲಕ್ಷಾಂತರ ಮತದಾರರನ್ನು ಬೇಕಾಬಿಟ್ಟಿಯಾಗಿ ಡಿಲೀಟ್ ಮಾಡಿರುವ ಈ ತಲೆಬುಡವಿಲ್ಲದ ಪಟ್ಟಿಯನ್ನು ಕರ